MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 280 | ಶನಿವಾರ : 23-08-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 280 | SATURDAY : 23-08-2025 | RAICHUR | EMAIL: YUVAMARGA@GMAIL.COM | PAGE:4 | PRICE: Rs:2-00

## ಅಕ್ರಮ ಗಣಿಗಾರಿಕೆಯಿಂದ 80 ಸಾವಿರ ಕೋಟಿ ನಷ್ಟ

**ಬೆಂಗಳೂರು,ಆ.22–** ರಾಜ್ಯದಲ್ಲಿ 2006 ರಿಂದ 2012 ರವರೆಗೆ ನಡೆದ ಅಕ್ರಮ ಗಣಿಗಾರಿಕೆಯಿಂದ ವಿದೇಶಕ್ಕೆ ಕಾನೂನು ಬಾಹಿರವಾಗಿ ಕಬ್ಬಿಣ ಅದಿರು ರಫ್ತು ಮಾಡಿದ ಕಾರಣ ಬೊಕ್ಕಸಕ್ಕೆ 80 ಸಾವಿರ ಕೋಟಿ ರೂ. ನಷ್ಟವಾಗಿದೆ ಎಂದು ಸಚಿವ ಎಚ್.ಕೆ.ಪಾಟೀಲ್ ವಿಧಾನಪರಿಷತ್‌ನಲ್ಲಿ ಬಹಿರಂಗಪಡಿಸಿದ್ದಾರೆ.

ವಿಧಾನಸಭೆಯಲ್ಲಿ ಅಂಗೀಕೃತವಾಗಿದ್ದ ಕರ್ನಾಟಕ ಅಕ್ರಮ ಗಣಿಗಾರಿಕೆಯ ಆಸ್ತಿ ವಶಪಡಿಸಿಕೊಳ್ಳಲು ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕ ಮಸೂದೆ 2005 ಯನ್ನು ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಪರವಾಗಿ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಎಚ್.ಕೆ.ಪಾಟೀಲ್ ಮಂಡಿಸಿ ವಿವರಣೆ ನೀಡಿದರು.

2006, 2011 ಮತ್ತು 2012 ರ ವೇಳೆ ರಾಜ್ಯದ ವಿವಿಧೆಡೆ ಕಾನೂನು ಬಾಹಿರವಾಗಿ ಅಕ್ರಮ ಗಣಿಗಾರಿಕೆ ನಡೆಸಲಾಗಿದೆ. ಒಟ್ಟು 80 ಸಾವಿರ ಮೆಟ್ರಿಕ್ ಟನ್ ಕಬ್ಬಿಣದ ಅದಿರನ್ನು ಚೀನಾ, ಪಾಕಿಸ್ತಾನ ಸೇರಿದಂತೆ ಹೊರರಾಷ್ಟ್ರಗಳಿಗೆ ರಫ್ತು ಮಾಡಿದ ಪರಿಣಾಮ 80 ಸಾವಿರ ಕೋಟಿ ರೂ. ನಷ್ಟವಾಗಿದೆ ಎಂಬುದನ್ನು ಒಪ್ಪಿಕೊಂಡರು.

ನಿವೃತ್ತ ಲೋಕಾಯುಕ್ತ ನ್ಯಾಯಮೂರ್ತಿ ಎನ್.ಸಂತೋಷ್ ಹೆಗ್ಡೆ ಅವರು ಸರ್ಕಾರಕ್ಕೆ ನೀಡಿದ್ದ ವರದಿಯಲ್ಲಿ ವಿದೇಶಕ್ಕೆ ರಫ್ತು ಮಾಡಿರುವ ಕಬ್ಬಿಣದ ಅದಿರು ಮಾಹಿತಿ ಕುರಿತು ಸವಿಸ್ತಾರ ವರದಿಯನ್ನು



ನೀಡಿದ್ದಾರೆ. ಪ್ರತಿ ಮೆಟ್ರಿಕ್ ಟನ್ ಅದಿರಿಗೆ 4,300 ಕೋಟಿ ರೂ.ನಂತೆ ಒಟ್ಟು 80 ಸಾವಿರ ಮೆಟ್ರಿಕ್ ಟನ್ ಅದಿರು ರಫ್ತು ಮಾಡಲಾಗಿದೆ. ಇದನ್ನು ವಶಪಡಿಸಿಕೊಳ್ಳುವುದು ಒಂದು ಜವಾಬ್ದಾರಿಯುತ ಸರ್ಕಾರದ ಆದ್ಯ ಕರ್ತವ್ಯ ಎಂದರು.

ಈ ಅವಧಿಯಲ್ಲಿ ಗಣಿಗಾರಿಕೆ ನಡೆಸುವವರು ನಿಯಮಗಳನ್ನು ಸಂಪೂರ್ಣವಾಗಿ ಗಾಳಿಗೆ ತೂರಿದ್ದಾರೆ. ಒಂದು ಕಾಲದಲ್ಲಿ ರಾಜ್ಯಪಾಲರ ಕಾರು ಮತ್ತು ಅವರ ಬೆಂಗಾವಲು ವಾಹನಗಳು ಹೋಗುತ್ತಿದ್ದ ವೇಳೆ ಅದನ್ನು ಲೆಕ್ಕಿಸದೆ ಲಾರಿಯು ಸಾಗಾಣಿಕೆ ನಡೆಸಿರುವ ನಿದರ್ಶನವಿದೆ. ಇದು ನಾವು ಕಡಿವಾಣ ಹಾಕದಿದ್ದರ ಪರಿಣಾಮ ಎಂದು ವಿಷಾದಿಸಿದರು.

## ನೆರೆ ಪೀಡಿತ ಪ್ರದೇಶದಲ್ಲಿ ಸಂಚಾರಿ ವೈದ್ಯಕೀಯ ಘಟಕ ಸ್ಥಾಪನೆ

**ಯುವ ಮಾರ್ಗ ಸುದ್ದಿ**




**ಲಿಂಗಸುಗೂರು,ಆ.22–**ಬಸವಸಾಗರ ಜಲಾಶಯದಿಂದ 2.60 ಲಕ್ಷ ಕ್ಯೂಸೆಕ್ ಗಿಂತಲೂ ಅಧಿಕ ನೀರು ಕೃಷ್ಣಾ ನದಿಗೆ ಬಿಡುಗಡೆ ಮಾಡಿದ ಕಾರಣ ಶೀಲಹಳ್ಳಿ ಸೇತುವೆ ಸಂಪೂರ್ಣ ಮುಳುಗಡೆಯಾಗಿದೆ. ಇದರಿಂದ ನದಿ ತೀರದ ಪ್ರದೇಶಗಳಲ್ಲಿ ಸಂಚಾರಿ ವೈದ್ಯಕೀಯ ಘಟಕವನ್ನು ಸ್ಥಾಪಿಸಲಾಗಿದೆ ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಅಮರೇಶ್ ಪಾಟೀಲ ತಿಳಿಸಿದರು.

ತಾಲೂಕಿನ ಕಡದರಗಡ್ಡಿ,ಯರಗೋಡಿ, ಹಂಚಿನಾಳ,ಜಲದುರ್ಗ ಗ್ರಾಮ ಗ್ರಾಮಗಳಿಗೆ ನೆರೆ ಹಾವಳಿ ಕಡಿಮೆಯಾಗುವವರೆಗೆ ದಿನಾಲು ಸದರಿ ಮಾರ್ಗದಲ್ಲಿ ಸಂಚಾರಿ ಆರೋಗ್ಯ ಘಟಕ ಸೇವೆಯನ್ನು ಒದಗಿಸಲಾಗಿದೆ. .ಸಾಮಾನ್ಯ ಕಾಯಿಲೆಗಳಿಗೆ ಹಾಗೂ ಜ್ವರ ಚಿಕಿತ್ಸೆ.ಬಿ.ಪಿ.ಶುಗರ್ ತಪಾಸಣೆ, ಸೂಕ್ತ ಮಾರ್ಗದರ್ಶನ ಚಿಕಿತ್ಸೆ ವ್ಯವಸ್ಥೆ ಇದೆ ಎಂದರು.

ಆರೋಗ್ಯ ಶಿಕ್ಷಣಾಧಿಕಾರಿಗಳು, ಮಲೇರಿಯಾ ಹಾಗೂ ಸಾಂಕ್ರಾಮಿಕ ರೋಗ ಮೇಲ್ವಿಚಾರಕರು, ಇರುವವರು ಜೊತೆಗೆ ಈ ಗ್ರಾಮಗಳಲ್ಲಿ ಆರೋಗ್ಯ ಶಿಕ್ಷಣ, ಮಾಹಿತಿ, ಸಂವಹನ ಕಾರ್ಯಕ್ರಮ ಹಮ್ಮಿಕೊಂಡಿದ್ದಾರೆ.ಒಂದು ವೇಳೆ ನೀರಿನ ಮಟ್ಟ ಹೆಚ್ಚಾದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಸೂಚನೆಯನ್ವಯ ಹೆರಿಗೆ ದಿನಾಂಕ ಹತ್ತಿರವಿದ್ದ ಗರ್ಭಿಣಿಯರನ್ನು ಈಚನಾಳ ಆರೋಗ್ಯ ಕೇಂದ್ರಕ್ಕೆ ಸ್ಥಳಾಂತರ ಮಾಡಲಾಗುವದು.ಈ ಸಂದರ್ಭದಲ್ಲಿ ಸಂಚಾರಿ ವೈದ್ಯಕೀಯ ಮೇಲ್ವಿಚಾರಣೆ ವೈದ್ಯಾಧಿಕರುಗಳ ತಂಡದ ಜೊತೆಗೆ ಶುಶ್ರೂಷಕ ಅಧಿಕಾರಿ ರಂಗಸ್ವಾಮಿ,ಬಸವರಾಜ. ಸಿದ್ಧಾರೂಢ ಇವರು ಕಾರ್ಯನಿರ್ವಹಿಸುತ್ತಿದ್ದಾರೆ.

## ಉಪ ಲೋಕಾಯುಕ್ತರ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಲು ಸಿದ್ಧತೆಗೆ ಸೂಚನೆ

**ಯುವ ಮಾರ್ಗ ಸುದ್ದಿ**

**ರಾಯಚೂರು,ಆ.22–**ರಾಯಚೂರು ಜಿಲ್ಲೆಯಲ್ಲಿ ಆಗಸ್ಟ್ 28 ರಿಂದ ಆಗಸ್ಟ್ 30ರವರೆಗೆ ಪ್ರವಾಸದಲ್ಲಿರುವ ಉಪ ಲೋಕಾಯುಕ್ತರ ಕಾರ್ಯಕ್ರಮವು ಶಿಸ್ತುಬದ್ಧವಾಗಿ ಮತ್ತು ಶಿಷ್ಟಾಚಾರದಂತೆ ನಡೆಯಲು ಎಲ್ಲಾ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಗಸ್ಟ್ 22ರ ಸಂಜೆ ನಡೆದ ಮತ್ತೊಂದು ಸುತ್ತಿನ ಪೂರ್ವಭಾವಿ ಸಿದ್ಧತಾ ಸಭೆ ನಡೆಸಿ ಅವರು ಮಾತನಾಡಿದರು.

ಗೌರವಾನ್ವಿತ ಉಪ ಲೋಕಾಯುಕ್ತರಾದ ನ್ಯಾ.ಬಿ.ವೀರಪ್ಪ ಅವರು ರಾಯಚೂರು ಜಿಲ್ಲೆಯಲ್ಲಿ ಆಗಸ್ಟ್ 28, 29 ಮತ್ತು 30ರಂದು ಮೂರು ದಿನಗಳ ಕಾಲ ಕೈಗೊಂಡ ನಾನಾ ಕಾರ್ಯಕ್ರಮಗಳ ಬಗ್ಗೆ ಈಗಾಗಲೇ ಅಧೀಕೃತ ಪ್ರವಾಸದ ವಿವರ



ಬಂದಿರುತ್ತದೆ. ಅದರಂತೆ ಎಲ್ಲ ಕಾರ್ಯಕ್ರಮಗಳು ಸಮಯಕ್ಕೆ ಸರಿಯಾಗಿ ನಡೆಯಬೇಕು. ಶಿಷ್ಟಾಚಾರ ಉಲ್ಲಂಘನೆಯಾಗದಂತೆ ಎಲ್ಲಾ ಕಾರ್ಯಕ್ರಮಗಳು ಸಮಯಕ್ಕನುಸಾರ ಸುವ್ಯವಸ್ಥಿತವಾಗಿ ನಡೆಯಬೇಕು.

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಜಗಜ್ಯೋತಿ ಬಸವೇಶ್ವರರ ಆಡಿಟೋರಿಯಂ ಹಾಲ್, ಜಿಲ್ಲಾ ನ್ಯಾಯಾಲಯದ ಸಂಕೀರ್ಣ ಸೇರಿದಂತೆ ವಿವಿಧೆಡೆ ಕಾರ್ಯಕ್ರಮ ನಡೆಯುವ ಬಗ್ಗೆ ಮತ್ತು ಕಾರ್ಯಕ್ರಮದ ವಿವರದ ಬಗ್ಗೆ ಅಧಿಕಾರಿಗಳಿಗೆ ತಿಳಿಸಲಾಗಿದೆ. ಕಾರ್ಯಕ್ರಮದ ಸ್ಥಳದಲ್ಲಿ ಊಟ, ಉಪಹಾರ, ಚಹಾ ವಿತರಣೆ, ಕುಡಿಯುವ ನೀರು ಪೂರೈಕೆ, ಕಾರ್ಯಕ್ರಮದ ಸ್ಥಳವು ಶುಚಿಯಾಗಿರುವುದು ಮತ್ತು ಸೂಕ್ತ ಪೊಲೀಸ್ ಭದ್ರತೆ ಏರ್ಪಾಡು ಹೀಗೆ ನಾನಾ ಕಾರ್ಯಗಳ ಬಗ್ಗೆ ಈಗಾಗಲೇ ಜಿಲ್ಲಾಡಳಿತದಿಂದ ಸಮಿತಿ ರಚನೆ ಮಾಡಿ ಹಂಚಿಕೆ ಮಾಡಿದಂತೆ ಎಲ್ಲ ಕಾರ್ಯಗಳ **(2ನೇಪುಟಕ್ಕೆ)**

## ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಶಾಂತಿ ಸಭೆ

**ಯುವ ಮಾರ್ಗ ಸುದ್ದಿ**




**ಮಾನ್ವಿ,ಆ.22–**ಪಟ್ಟಣದ ಪೊಲೀಸ್ ಠಾಣೆಯಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ವತಿಯಿಂದ ನಡೆದ ಗಣೇಶ ಹಬ್ಬ ಹಾಗೂ ಈದ್‌ಮಿಲಾದ್ ಹಬ್ಬದ ಪೂರ್ವಭಾವಿ ಶಾಂತಿ ಸಭೆಯಲ್ಲಿ ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪುಟ್ಟಮಾದಯ್ಯ ಮಾತನಾಡಿ ಪೊಲೀಸರು ಹಾಗೂ ನಾಗರಿಕರು ಒಂದೇ ನಾಣ್ಯದ ಎರಡು ಮುಖಗಳಿದಂತೆ ಪೊಲೀಸರು ಸಮವಸ್ತ್ರವನ್ನು ಹಾಕಿಕೊಂಡು ಕರ್ತವ್ಯ ನಿರ್ವಹಿಸಿದರೆ ನಾಗರಿಕರು ಸಮವಸ್ತ್ರ ಇಲ್ಲದೆಯೇ ಕರ್ತವ್ಯ ನಿರ್ವಹಿಸುತ್ತರೆ. ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಆ. 27 ರಿಂದ ನಡೆಯುವ ಗಣೇಶ ಹಬ್ಬ ಹಾಗೂ ಸೇ.5 ರಂದು ನಡೆಯುವ ಈದ್ ಮಿಲಾದ್ ಹಬ್ಬಗಳನ್ನು ಹಿಂದೂ ಮತ್ತು ಮುಸ್ಲಿಂ ಬಂದವರು ಶಾಂತಿ ಮತ್ತು ಸೌಹಾರ್ದತೆಯಿಂದ ಆಚರಿಸಬೇಕು. ಗಣೇಶ ಹಬ್ಬವನ್ನು ಸುವ್ಯವಸ್ಥಿತವಾಗಿ ನಡೆಯುವುದಕ್ಕಾಗಿ ಪೊಲೀಸ್ ಇಲಾಖೆ 'ಯಿಂದ 28 ನಿಯಮಗಳನ್ನು ರೂಪಿಸಲಾಗಿದ್ದು ಅವುಗಳನ್ನು ಎಲ್ಲಾ ಗಣೇಶ ಮಂಡಳಿಯವರು ಕಡ್ಡಾಯವಾಗಿ ಪಾಲಿಸಬೇಕು ಹಾಗೂ ಪ್ರಕೃತಿಗೆ ಪೂರಕವಾಗಿರುವಂತೆ ಗಣೇಶ ಹಬ್ಬವನ್ನು ಆಚರಿಸುವುದಕ್ಕಾಗಿ ಮಣ್ಣಿನ ಗಣೇಶ ಮೂರ್ತಿಗಳನ್ನು ಕೂಡಿಸಿ ಹಾಗೂ ಅಲಂಕಾರಕ್ಕೆ ಪ್ಲಾಸ್ಟಿಕ್ ನಿಂದ ಮಾಡಿದ ಅಲಂಕಾರಿಕ ವಸ್ತುಗಳನ್ನು ಬಳಸಬೇಡಿ. ಗಣೇಶನನ್ನು ಕೂಡಿಸಿದ ನಂತರ ವಿಸರ್ಜನೆ ಯಾಗುವವರೆಗೂ ಭಕ್ತಿ ಭಾವದಿಂದ ಹಬ್ಬವನ್ನು ಆಚರಿಸಬೇಕು. ಜೇಸ್ಕಾ ಇಲಾಖೆಯಿಂದ ಮಾತ್ರ ಅಧಿಕೃತವಾಗಿ ವಿದ್ಯುತ್ ಸಂಪರ್ಕ ಪಡೆಯಬೇಕು. ಗಣೇಶ ಪೆಂಡಲ್ ನಲ್ಲಿ ಬೆಂಕಿ ಆಕಸ್ಮಿಕ ಸಂಭವಿಸಿದಲ್ಲಿ ನಂದಿಸುವುದಕ್ಕೆ ಅಗತ್ಯ ಸಲಕರಣೆಗಳನ್ನು ಸಂಗ್ರಹಿಸಿರಬೇಕು.ಮಹಿಳೆಯರಿಗೆ ಪ್ರತ್ಯಕವಾದ ಸಾಲಿನ ವ್ಯವಸ್ಥೆ ಮಾಡಿರಬೇಕು, ವಿಸರ್ಜನೆ ಸಮಯದಲ್ಲಿ ಪೊಲೀಸ್ ಇಲಾಖೆ ಗುರುತಿಸಿದ ಮಾರ್ಗದಲ್ಲಿಯೇ ಮೆರವಣಿಗೆ ನಡೆಸಬೇಕು. ಮೆರವಣಿಗೆ ಸಮಯದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪ್ರಮುಖ ಬೀದಿಗಳಲ್ಲಿ ಸಿ.ಸಿ.ಕ್ಯಾಮರ ಅಳವಡಿಸಲಾಗುವುದು ಹಾಗೂ ಡ್ರೋನ್ ಕಾಣ್ಗಾವಲು ಹಾಕಲಾಗುವುದು. ಮೆರವಣಿಗೆ ಸಮಯದಲ್ಲಿ **(2ನೇಪುಟಕ್ಕೆ)**

## ಅಕ್ರಮ ಹಣ ವರ್ಗಾವಣೆ ಕೈ ಶಾಸಕ ವೀರೇಂದ್ರಗೆ ಇಡಿ ಶಾಕ್

**ಬೆಂಗಳೂರು,ಆ.22–**ಚಿತ್ರದುರ್ಗದ ಶಾಸಕ ಹಾಗೂ ನಟ ದೊಡ್ಡಣ್ಣ ಅವರ ಅಳಿಯ ಕೆ.ಸಿ ವೀರೇಂದ್ರ ಪಪ್ಪಿ ಅವರ ಮನೆ ಮತ್ತು ಕಂಪನಿಗಳ ಮೇಲೆ ಅಕ್ರಮ ಹಣ ವರ್ಗಾವಣೆ ಆರೋಪದ ಮೇಲೆ ಬೆಂಗಳೂರು, ಚಿತ್ರದುರ್ಗ ಸೇರಿದಂತೆ 17 ಕಡೆ ಜಾರಿನಿರ್ದೇಶನಾಯಲದ ಅಧಿಕಾರಿಗಳು ಹಠಾತ್ ದಾಳಿ ನಡೆಸಿದ್ದಾರೆ.

ಬೆಂಗಳೂರು, ಚಳ್ಳಕೆರೆ, ಚಿತ್ರದುರ್ಗ, ಗೋವಾ ಸೇರಿದಂತೆ 17 ಕಡೆಗಳಲ್ಲಿ ದಾಖಲೆಗಳನ್ನು ಪರಿಶೀಲಿಸಿದ್ದಾರೆ. ಬೆಂಗಳೂರಿನ ವಸಂತ ನಗರದಲ್ಲಿರುವ ಶಾಸಕ ವೀರೇಂದ್ರ ಅವರ ಖಾಸಗಿ ಅಪಾರ್ಟ್‌ಮೆಂಟ್ ಹಾಗೂ ಸಹಕಾರ ನಗರದಲ್ಲಿರುವ ನಿವಾಸಗಳ ಮೇಲೆ ದಾಳಿ ಮಾಡಿದ್ದಾರೆ.

ಚಳ್ಳಕೆರೆಯಲ್ಲಿರುವ ಶಾಸಕರ ನಿವಾಸ ಸೇರಿದಂತೆ ಅವರ ಸಹೋದರರಾದ ಕೆ.ಸಿ ನಾಗರಾಜ್ ಮತ್ತು ಕೆ.ಸಿ ತಿಪ್ಪೇಸ್ವಾಮಿ ಅವರ ನಿವಾಸಗಳ ಮೇಲೂ 10 ಮಂದಿ ಅಧಿಕಾರಿಗಳ ತಂಡ 3 ಇನೋವಾ ಕಾರುಗಳಲ್ಲಿ ಆಗಮಿಸಿ ಬೆಳ್ಳಂಬೆಳಿಗ್ಗೆ ಲಗ್ಗೆ ಹಾಕಿ ಪರಿಶೀಲನೆ ನಡೆಸಿದೆ.ದಾಳಿಯ ಸಂದರ್ಭದಲ್ಲಿ ಶಾಸಕ ವೀರೇಂದ್ರ ಪಪ್ಪಿ ಸಿಕ್ಕಿಂನಲ್ಲಿದ್ದಾರೆಂದು ಹೇಳಲಾಗಿದೆ.

## ಗಣೇಶ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ : ಎಸ್.ಪಿ ಜಿ.ಹರೀಶ್

**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಆ.22–**ಗಣೇಶ ಚತುರ್ಥಿ ಹಬ್ಬವನ್ನು ಶಾಂತಿಯುತವಾಗಿ, ಸೌಹಾರ್ದಯುತವಾಗಿ ಆಚರಣೆ ಮಾಡಿ, ಸಮಾಜದಲ್ಲಿ ಶಾಂತಿ ಕದಡಿದರೆ ಅಂತವರ ಮೇಲೆ ನಿರ್ಧಾಕ್ಷನ್ಯವಾಗಿ ಕ್ರಮ ಕೈಗೊಳ್ಳಲಾಗುವದು ಎಂದು ಜಿಲ್ಲಾ ಪೊಲೀಸ್ ವರಿಷ್ಠಧಿಕಾರಿ ಜಿ.ಹರೀಶ್ ಹೇಳಿದರು.

ಪಟ್ಟದನದ ಪೊಲೀಸ್ ಸ್ಟೇಷನನಲ್ಲಿ ಗಣೇಶ ಚತುರ್ಥಿ ನಿಮಿತ್ಯಹಮ್ಮಿಕೊಂಡ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು. ಪಟ್ಟಣದಲ್ಲಿ 130 ಸ್ಥಳಗಳಲ್ಲಿ ಸಾರ್ವಜನಿಕರು ಗಣಪತಿಯನ್ನು ಇಡಲಾಗುತ್ತದೆ. ಇವರೆಲ್ಲರೂ ಕಾನೂನಿನ ಪ್ರಕಾರ ಸಂಬಂಧ ಪಟ್ಟ ಇಲಾಖೆಯಿಂದ ಪರವಾನಿಗೆ ಪಡೆದುಕೊಂಡು ಗಣೇಶ ಚತುರ್ಥಿ ಆಚರಿಸಿ,ಜೊತೆಗೆ ಪೋಲಿಸ್ ಇಲಾಖೆಯ ವತಿಯಿಂದ ಸಿಸಿ




ಕ್ಯಾಮರಾ ಅಳವಡಿಸಿಕೊಳ್ಳಬೇಕು.

ಪೋಲಿಸ್ ಠಾಣೆಯಿಂದ ಸಿಬ್ಬಂದಿಯನ್ನು ನೇಮಕ ಮಾಡಲಾಗುವದು, ತಾಲೂಕಿನಲ್ಲಿ ಮದ್ಯಪಾನ ನಿಷೇಧ ಮಾಡಲಾಗುವದು.ದ್ವೇಷವನ್ನು ಬಿಟ್ಟು ಹಬ್ಬವನ್ನು ಸೌಹಾರ್ದತವಾಗಿ ಆಚರಣೆ ಮಾಡಿ.

ಗಣೇಶ ವಿಸರ್ಜನೆ ಸಂದರ್ಭದಲ್ಲಿ ವಿದ್ಯುತ್ ಪರವಾನಗಿ ಪಡೆದು ಶಾಂತಿಯಿಂದ ಮಾಡಬೇಕು, ವಾಹನ ಚಾಲಕರು ಪರವಾನಗಿ, ವಾಹನದು ಸಂಪೂರ್ಣ ದಾಖಲಾತಿ ಇರಬೇಕು, ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳಬೇಕು.ಕಾನೂನು ಚೌಕಟ್ಟಿನಲ್ಲಿ ಹಬ್ಬವನ್ನು ಆಚರಣೆ ಮಾಡಬೇಕು,ಡಿಜಿಯನ್ನು ಸಂಪೂರ್ಣವಾಗಿ ನಿಷೇಧಲಾಗಿದೆ. ಸಾಯಂಕಾಲ ನಾಲ್ಕು ಗಂಟೆಯಿಂದ ರಾತ್ರಿ ಹತ್ತು ಗಂಟೆಗೆ ಮೆರವಣಿಗೆ ಮುಗಿಸಿ ಗಣೇಶನನ್ನು ವಿಸರ್ಜನೆ ಮಾಡಿ ಮುಗಿಸಬೇಕು.

ವಿಸರ್ಜನೆ ಮಾಡವ ವೇಳೆ ಜಾಗೃತಿ ವಹಿಸಿಬೇಕು ಎಂದು ಎಚ್ಚರಿಕೆ ಕೊಟ್ಟರು.ಸಹಾಯಕ ಆಯುಕ್ತರು ಬರವಣ್ಣೆಪ್ಪ ಕಲಶೆಟ್ಟಿ ಮಾತನಾಡಿ**(2ನೇಪುಟಕ್ಕೆ)**

## ಎಫ್ ಆರ್ ಎಸ್ ವಿರೋಧಿಸಿ ದೇವದುರ್ಗದಲ್ಲಿ ಅಂಗನವಾಡಿ ನೌಕರರ ಪ್ರತಿಭಟನೆ



**ಯುವ ಮಾರ್ಗ ಸುದ್ದಿ**

**ದೇವದುರ್ಗ,ಆ.22–**ಎಫ್ ಆರ್ ಎಸ್ ವಿರೋಧಿಸಿ ದೇವದುರ್ಗ ದಲ್ಲಿ ಸಿಐಟಿಯು ಸಂಯೋಜಿತ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘಟನೆ ಯಿಂದ ಎಫ್ ಆರ್ ಎಸ್ ಪದ್ದತಿ ರದ್ದು ಪಡಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರ್ಯಲಯದ ಮುಂದೆ ಪ್ರತಿಭಟನೆ ಮಾಡಿ ಸಿಡಿಪಿಓ ಅನುಪಸ್ಥಿತಿಯಲ್ಲಿ ದೇವರಾಜ ಇವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಐಸಿಡಿಎಸ್ ಗೆ 50 ವರ್ಷ ಕಳೆದಿವೆ ಈ ಯೋಜನೆ ಯಿಂದ ರಾಷ್ಟ್ರದಲ್ಲಿ ಗರ್ಭಿಣಿ ಬಾಣಂತಿ ಯರ ಸಾವು ಮತ್ತು ಮಕ್ಕಳ ಸಾವು ಕಡಿಮೆಯಾಗಿವೆ ಜೊತೆಗೆ ದೇಶದಲ್ಲಿ ಅಪೌಷ್ಟಿಕತೆ ಕೂಡ ಶೇಕಡ 90% ಹೋಗಲಾಡಿಸಲು ಸಾದ್ಯವಾಗಿದೆ, ಇಂತಹ ಯೋಜನೆಯನ್ನು ದುರ್ಬಲಗೊಳಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ ಎಫ್ ಆರ್ ಎಸ್ ಪದ್ಧತಿ ತಂದಿದೆ ,ಇದರಿಂದಾಗಿ 2013 ಆಹಾರ ಭದ್ರತೆ ಕಾಯ್ದೆ ಪ್ರಕಾರ ಜೊತೆಗೆ ಸುಪ್ರೀಂ ಕೋರ್ಟ್ ನಿರ್ದೇಶನದಂತೆ ಆಧಾರ ಕಾರ್ಡ ನೆಪದಲ್ಲಿ ವಂಚನೆ ಯಾಗುತ್ತದೆ, ಎಫ್ ಆರ್ ಎಸ್ ಸಂಗರಹಿಸುವದರಿಂದ ಮಹಿತಿ ಸೋರಿಕೆಯಾಗುತ್ತದೆ,ಮತ್ತು ಶೇಕಡಾ 60 % ತನ್ನ ಪಾಲಿನ ವಂತಿಗೆಯನ್ನು ಕೇಂದ್ರ ಸರ್ಕಾರ ಕಡಿತ ಮಾಡುತ್ತದೆ ಎಂದು ಮನವಿ ಪತ್ರದಲ್ಲಿ ತಿಳಿಸಲಾಗಿದೆ,

ಪ್ರತಿಭಟನೆ ನೇತೃತ್ವವನ್ನು ಸಂಘಟನೆಯ ಅದ್ಯಕ್ಷರಾದ ರಂಗಮ್ಮ ಅನ್ವರ್, ಕಾರ್ಯದರ್ಶಿ ರಮಾದೇವಿ, ಖಜಾಂಚಿ ಈಶಮ್ಮ ಊಟಿ,ಮುಖಂಡರಾದ ಚಂದ್ರಕಲಾ, ಶ್ರೀದೇವಿ,ರಂಗಮ್ಮಅರಸಿಣಿಗಿ,ಗುಂಡಮ್ಮ,ಸುಮಂಗಲಾ, ರೇಣುಕಾ,ಮಂಜುಳಾ,

## ಮೊದಲನೇಯ ಪುಟದಿಂದ

# ಅಕ್ರಮ ಗಣಿಗಾರಿಕೆಯಿಂದ 80 ಸಾವಿರ ಕೋಟಿ ನಷ್ಟ

ಈ ಹಿಂದೆ ಷೇರು ಮಾರುಕಟ್ಟೆಯಲ್ಲಿ ಸಾವಿರಾರು ಕೋಟಿ ವಂಚನೆ ಮಾಡಿದ ಹರ್ಷದ್ ಮೆಹ್ತಾ ಪ್ರಕರಣವನ್ನು ತನಿಖೆ ಮಾಡಿಸಿದಾಗ 7 ಸಾವಿರ ಕೋಟಿ ರೂ.ಗಳನ್ನು ವಶಪಡಿಸಿಕೊಳ್ಳಲಾಯಿತು. ಈಗ ಅಕ್ರಮ ಗಣಿಗಾರಿಕೆ ನಡೆಸಿರುವವರ ಮೇಲೂ ಕಾನೂನು ಪ್ರಕಾರ ಕ್ರಮ ಕೈಗೊಂಡು ವಶಪಡಿಸಿಕೊಳ್ಳಬೇಕು. ಇದಕ್ಕಾಗಿ ಈ ವಿಧೇಯಕವನ್ನು ಜಾರಿಗೆ ತಂದಿದ್ದೇವೆ ಎಂದು ಸಚಿವ ಎಚ್.ಕೆ.ಪಾಟೀಲ್ ಸಮರ್ಥನೆ ಮಾಡಿಕೊಂಡರು.

ಈ ವಿಧೇಯಕದ ಬಗ್ಗೆ ಸಚಿವ ಸಂಪುಟ ಸಭೆ ಹಾಗೂ ಸಚಿವ ಸಂಪುಟದ ಉಪಸಮಿತಿಯಲ್ಲೂ ಸುದೀರ್ಘವಾಗಿ ಚರ್ಚೆ ಮಾಡಲಾಗಿದೆ. ಸರ್ಕಾರದ ಬೊಕ್ಕಸಕ್ಕೆ ನಷ್ಟ ಮಾಡಿರುವುದನ್ನು ಹುಸಿ ಮಾಡಲೇಬೇಕು. ಇದರಲ್ಲಿ ರಾಜಿಯಾಗುವ ಪ್ರಶ್ನೆಯೇ ಇಲ್ಲ ಎಂದು ಸ್ಪಷ್ಟಪಡಿಸಿದರು.ಈ ವಿಧೇಯಕದ ಮೇಲೆ ಸದಸ್ಯರಾದ ಐವಾನ್ ಡಿಸೋಜ, ಟಿ.ಎ.ಶರವಣ, ವೈ.ಎಂ.ಸತೀಶ್ ಮತ್ತಿತರ ಸದಸ್ಯರು ಮಾತನಾಡಿ ಸರ್ಕಾರಕ್ಕೆ ಕೆಲವು ಸಲಹೆಗಳನ್ನು ನೀಡಿದರು.

**ವಿಧೇಯಕ ಅನುಮೋದನೆ :** ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶಪಡಿಸಿಕೊಳ್ಳುವುದು ಮತ್ತು ಜಪ್ತಿಗಾಗಿ ವಸೂಲಿ ಆಯುಕ್ತರನ್ನು ನೇಮಿಸುವ ಸಂಬಂಧಪಟ್ಟ ವಿಧೇಯಕಕ್ಕೆ ವಿಧಾನಪರಿಷತ್‌ನಲ್ಲಿ ಅನುಮೋದನೆ ನೀಡಲಾಯಿತು. ಅಕ್ರಮ ಗಣಿಗಾರಿಕೆ ಮತ್ತು ಅಪರಾಧದ ಉತ್ಪತ್ತಿಗಳಿಂದಾದ ಸ್ವತ್ತನ್ನು ವಶ ಪಡಿಸಿಕೊಳ್ಳುವುದಕ್ಕಾಗಿ ಮತ್ತು ಜಪ್ತಿಗಾಗಿ ವಸೂಲಿ ಆಯುಕ್ತರನ್ನು ನೇಮಿಸುವ ಸಂಬಂಧಪಟ್ಟ ವಿಧೇಯಕ ಇದಾಗಿದೆ.

ಅಕ್ರಮ ಗಣಿಗಾರಿಕೆಯ ಆಸ್ತಿ ವಶಪಡಿಸಿಕೊಳ್ಳಲು ಮತ್ತು ಜಪ್ತಿಗಾಗಿ ವಸೂಲಾತಿ ಆಯುಕ್ತರ ನೇಮಕ ಮಸೂದೆ 2005, ಅಕ್ರಮ ಗಣಿಗಾರಿಕೆ ಚಟುವಟಿಕೆಗಳಿಂದ ಪಡೆದ ಆಸ್ತಿಗಳನ್ನು ವಶಪಡಿಸಿಕೊಳ್ಳಲು, ಜಪ್ತಿ ಮಾಡಲು ಆಯುಕ್ತರ ನೇಮಕಕ್ಕೆ ಅವಕಾಶ ನೀಡುತ್ತದೆ. ವಸೂಲಾತಿ ಪ್ರಕ್ರಿಯೆಗಳನ್ನು ಮೇಲ್ವಿಚಾರಣೆ ಮಾಡಲು ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ಶ್ರೇಣಿಗಿಂತ ಕಡಿಮೆಯಿಲ್ಲದ ಸೇವೆಯಲ್ಲಿರುವ ಅಥವಾ ನಿವೃತ್ತ ಅಧಿಕಾರಿಯನ್ನು ವಸೂಲಾತಿ ಕಮಿಷನರ್ ಆಗಿ ನೇಮಿಸಲಾಗುತ್ತದೆ.

ರಾಜ್ಯದಲ್ಲಿ ಲೆಕ್ಕವಿಲ್ಲದಷ್ಟು ಗುತ್ತಿಗೆದಾರರು, ಸಾಗಾಣಿಕೆದಾರರು, ರಫ್ತುದಾರರು, ದಾಸ್ತಾನು ಧಾರಕರು, ಖರೀದಿದಾರರು ಮತ್ತು ಮಧ್ಯವರ್ತಿಗಳು ಸೇರಿದಂತೆ ಬಹು ವಹಿವಾಟುಗಳಿಂದ ಅಕ್ರಮ ಗಣಿಗಾರಿಕೆ ಚಟುವಟಿಕೆಗಳು ನಡೆದಿವೆ. ಅದು ವ್ಯವಸ್ಥಿತ ಒಳಸಂಚು ಹೊಂದಿರುವ ಸಂಘಟಿತ ಅಪರಾಧ. ಇದರಿಂದ ಸರ್ಕಾರಕ್ಕಾಗಿರುವ ನಷ್ಟದ ವಸೂಲಾತಿಗೆ ವಿಧೇಯಕ ಜಾರಿಗೊಳಿಸಲಾಗುತ್ತಿದೆ.

ಇದಕ್ಕಾಗಿ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ದರ್ಜೆಗಿಂತ ಕಡಿಮೆಯಿಲ್ಲದ, ಸೇವೆಯಲ್ಲಿರುವ ಅಥವಾ ನಿವೃತ್ತ ಅಧಿಕಾರಿಯನ್ನು ವಸೂಲಾತಿ ಆಯುಕ್ತರನ್ನಾಗಿ ನೇಮಕ ಮಾಡಲು ಅವಕಾಶ ಕಲ್ಪಿಸಿಕೊಳ್ಳಲಾಗಿದೆ. ನೇಮಕವಾಗುವ ವಸೂಲಾತಿ ಆಯುಕ್ತರು ಅಕ್ರಮ ಗಣಿಗಾರಿಕೆಯಲ್ಲಿ ಪಾಲ್ಗೊಂಡವರ ಚರ ಮತ್ತು ಸ್ಥಿರಾಸ್ತಿಗಳ ಜಪ್ತಿ ಅಥವಾ ಮುಟ್ಟುಗೋಲು ಮತ್ತು ವಸಲಾತಿ ಕಾರ್ಯಾಚರಣೆಗಳ ಮೇಲೆ ಒಟ್ಟಾರೆ ಮೇಲ್ವಿಚಾರಣಾ ಅಧಿಕಾರವನ್ನು ಹೊಂದಿರುತ್ತಾರೆ. ಅದರ ಜತೆಗೆ ಅಕ್ರಮ ಗಣಿಗಾರಿಕೆಗೆ ಸಂಬಂಧಿಸಿದಂತೆ ಬರುವ ದೂರುಗಳನ್ನು, ದಾಖಲೆ, ವರದಿಯನ್ನು ಪರಿಶೀಲಿಸಬೇಕು. ಅಲ್ಲದೆ, ಸ್ವತ್ತುಗಳ ಜಪ್ತಿಗೆ ಹೊರಡಿಸುವ ಎಲ್ಲ ಮುಟ್ಟುಗೋಲು ಆದೇಶಗಳನ್ನು ರಾಜ್ಯ ಸರ್ಕಾರದಿಂದ ದೃಢೀಕರಿಸಿಕೊಳ್ಳಬೇಕು. ಅದರ ಜತೆಗೆ ಜಪ್ತಿ ಅಥವಾ ಮುಟ್ಟುಗೋಲಿಗೂ ಮುನ್ನ ಕಾನೂನು ಪ್ರಕಾರ ಸೂಚನೆಗಳನ್ನು ಪಾಲಿಸಬೇಕು ಎಂಬ ನಿಯಮ ವಿಧೇಯಕದಲ್ಲಿದೆ.

# ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಶಾಂತಿ ಸಭೆ

ಪ್ರಚೋದನೆಕಾರಿ ಭಿತ್ತಿ ಪತ್ರ ಪ್ರದರ್ಶನ, ಮಾರಕ ಆಯುಧಗಳನ್ನು ಹೊಂದುವುದು, ಡಿ.ಜೆ. ಹಾಕುವುದು, ಆಶ್ಲಿಲ ಹಾಡುಗಳನ್ನು ಹಾಕುವುದು, ಅಮಲು ಪದಾರ್ಥಗಳನ್ನು ಸೇವಿಸಿ ಮೆರವಣಿಗೆಯಲ್ಲಿ ಆಶ್ಲಿಲವಾಗಿ ಕುಣಿಯುವುದನ್ನು ನಿ?ಷೇದಿಸಲಾಗಿದೆ .ರಾತ್ರಿ 10ರೊಳಗಾಗಿ ಗಣೇಶ ಮೂರ್ತಿಗಳನ್ನು ವಿಸರ್ಜನೆ ಮಾಡಬೇಕು. ವಿಸರ್ಜನೆ ಸ್ಥಳದಲ್ಲಿ ನುರಿತ ಈಜುಗಾರರ ತಂಡದ ವ್ಯವಸ್ಥೆ ಹಾಗೂ ಕ್ರೇನ್ ವ್ಯವಸ್ಥೆ ಮಾಡಲಾಗುವುದು. ಸೇ.5 ರಂದು ಮುಸ್ಲಿಂ ಸಮುದಾಯದವರು ಈದ್ ಮೀಲಾದ್ ಹಬ್ಬವನ್ನು ಶಾಂತಿಯುತವಾಗಿ ಆಚರಿಸುವಂತೆ ತಿಳಿಸಿದರು.

ಪಿ.ಐ. ಸೋಮಶೇಖರ ಕೆಂಚರೆಡ್ಡಿ ಮಾತನಾಡಿ ಸಾರ್ವಜನಿಕವಾಗಿ ಗಣೇಶ ಮೂರ್ತಿಗಳನ್ನು ಕೂಡಿಸುವವರು ಕಡ್ಡಾಯವಾಗಿ ಅನುಮತಿಯನ್ನು ಪಡೆಯಬೇಕು ಅನುಮತಿ ನೀಡುವುದಕ್ಕಾಗಿ ಕಂದಾಯ ಇಲಾಖೆ,ಜೆಸ್ಕಾಂ,ಪುರಸಭೆ ,ಪೊಲೀಸ್ ಇಲಾಖೆಯ ಅಧಿಕಾರಿಗಳನ್ನು ಒಳಗೊಂಡ ಏಕಗಾವಾಕ್ಷಿ ಪದ್ದತಿಯನ್ನು ಪೊಲೀಸ್ ಠಾಣೆಯ ಆವರಣದಲ್ಲಿ ವ್ಯವಸ್ಥೆ ಮಾಡಲಾಗುವುದು.ರಾತ್ರಿ 10 ರ ನಂತರ ಧ್ವನಿವರ್ಧಕ ಬಳಸವುದನ್ನು ನಿಷೇಧಿಸಲಾಗಿದೆ. ಮೇರವಣಿಗೆ ಸಂಧರ್ಬದಲ್ಲಿ ಧಾರ್ಮಿಕ ಸ್ಥಳ,ಆಸ್ಪತ್ರೆ ಹತ್ತಿರ ಪಟ್ಟಾಕಿ ಸಿಡಿಸುವುದು ಹಾಗೂ ಡಿ.ಜೆ ಬಳಸುವುದನ್ನು ನಿಷೇಧಿಸಲಾಗಿದೆ.ಅದಕ್ಕೆ ಪರ್ಯಾಯವಾಗಿ ಸ್ಥಳಿಯ ಕಲಾವಿದರಿಗೆ ಅವಕಾಶ ಮಾಡಿಕೋಡಿ ,ಎಲ್ಲಾ ಗಣೇಶ ಮಂಡಳಿಯವರು ಹಗಲಿನ ಸಮಯದಲ್ಲಿ ಗಣೇಶನ ವಿಸರ್ಜನೆ ಮರವಣಿಗೆ ಮಾಡಿದಲ್ಲಿ ಒಳ್ಳೆಯದು. ಮೆರವಣಿಗೆ ಸಮಯದಲ್ಲಿ ನಿಗಧಿತ ರಸ್ತೆಯಲ್ಲಿ ಸಂಚರಿಸಿ ವಾಹನ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು. ಗಣೇಶ ಮಂಡಳಿಯವರು ತಮ್ಮ ಸ್ವಯಂ ಸೇವಕರಿಗೆ ಪ್ರತ್ಯಕವಾದ ಗುರುತಿನ ಚೀಟಿಗಳನ್ನು ಮಾಡಿಕೋಡಿ ಗಣೇಶನನ್ನು ಕೂಡಿಸಿದ ವಾಹನವನ್ನು ರಸ್ತೆಯಲ್ಲಿ ಒಂಟಿಯಾಗಿ ಬಿಟ್ಟು ಹೋಗಬಾರದು ,ಪರ್ಯಾಯ ಚಾಲಕರನ್ನು ಹೊಂದಿರಬೇಕು ಇಲಾಖೆಯ ನಿಯಮಗಳನ್ನು ಮೀರಿದವರ ಮೇಲೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ತಹಸೀಲ್ದಾರ್ ಭೀಮರಾಯ .ಬಿ. ರಾಮಸಮುದ್ರ, ಸಿಂಧನೂರು ಗ್ರಾಮೀಣ ಡಿ.ವೈ.ಎಸ್.ಪಿ. ಬಿ.ಎಸ್.ತಳವಾರ್ ಮಾತನಾಡಿದರು.

ಸಭೆಯಲ್ಲಿ ರಾಯಚೂರು ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ದೀಪಾ, ಜೆಸ್ಕಾಂ ಇಲಾಖೆಯ ಜೆ.ಇ. ಬಸವಲಿಂಗಪ್ಪ, ಹಿರಿಯ ನ್ಯಾಯಾವಾದಿಗಳಾದ ಎ.ಬಿ. ಉಪಳಮಠ,ಗುಮ್ಮಬಸವರಾಜ, ಪುರಸಭೆ ಸದಸ್ಯರಾದ ರಾಜಾಮಹೇಂದ್ರನಾಯಕ ರೇವಣಸಿದ್ದಯ್ಯಸ್ವಾಮಿ, ಬಾಷಸಾಬ್, ಮುಖಂಡರಾದ ಕೆ.ಬಸವಂತಪ್ಪ, ರಾಜಾ ಸುಭಾಷಚಂದ್ರನಾಯಕ,ರೆಹಮತ್ ,ಅದಮ್, ಹನುಮೇಶನಾಯಕ ಸೇರಿದಂತೆ ತಾಲೂಕಿನ ಗಣೇಶ ಮಂಡಳಿಗಳ ಪದಾಧಿಕಾರಿಗಳು, ಪಟ್ಟಣದ ನೂರಾರು ಹಿಂದೂ ಮತ್ತು ಮುಸ್ಲಿಂ ಸಮುದಾಯಗಳ ಮುಖಂಡರು ಭಾಗವಹಿಸಿದರು.

# ಉಪ ಲೋಕಾಯುಕ್ತರ ಕಾರ್ಯಕ್ರಮವು ಶಿಸ್ತುಬದ್ಧವಾಗಿ ನಡೆಯಲು ಸಿದ್ಧತೆಗೆ ಸೂಚನೆ

ನಿರ್ವಹಣೆಯು ಅಚ್ಚುಕಟ್ಟಾಗಿ ನಡೆಯಬೇಕು ಎಂದು ತಿಳಿಸಿದರು. ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣವು ಶುಚಿತ್ವದಿಂದ ಕೂಡಿರಬೇಕು. ಕಾರ್ಯಕ್ರಮದ ಸ್ಥಳವಾದ ಜಗಜ್ಯೋತಿ ಬಸವೇಶ್ವರರ ಸಭಾಂಗಣವನ್ನು ಧ್ವನಿ, ಬೆಳಕು, ಗಾಳಿ ಬರುವ ಹಾಗೆ ಅಚ್ಚುಕಟ್ಟಾಗಿ ಸಿದ್ಧಪಡಿಸಬೇಕು ಎಂದು ಸೂಚನೆ ನೀಡಿದರು.

ಈ ಕಾರ್ಯಕ್ರಮದ ಬಗ್ಗೆ ಇನ್ನು ಹೆಚ್ಚಿನ ರೀತಿಯಲ್ಲಿ ಪ್ರಚಾರ ನಡಯಬೇಕು. ಫಲಕಗಳಲ್ಲಿ ಬ್ಯಾನರ್ ಅಳವಡಿಸಿ ಮಾನ್ಯ ಲೋಕಾಯುಕ್ತರು ಆಗಮಿಸುವ ಬಗ್ಗೆ ಸಾರ್ವಜನಿಕರಿಗೆ ಮಾಹಿತಿ ಒದಗಿಸಬೇಕು. ಆಯಾ ಕಚೇರಿಗಳ ಮುಂದೆ ಬ್ಯಾನರ್ ಅಳವಡಿಸಿ ಪ್ರಚಾರ ನಡೆಸಬೇಕು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮಾನ್ಯ ಉಪ ಲೋಕಾಯುಕ್ತರ ಕಾರ್ಯಕ್ರಮಕ್ಕೆ ಕೆಲವೇ ದಿನಗಳು ಬಾಕಿ ಇದ್ದು ಬಾಕಿ ಕಾರ್ಯವನ್ನು ಬೇಗನೆ ಪೂರ್ಣಗೊಳಿಸಬೇಕು. ಕಾರ್ಯಕ್ರಮದ ದಿನಗಳಂದು ಅಧಿಕಾರಿಗಳು ಕಡ್ಡಾಯ ಹಾಜರಿರಬೇಕು ಎಂದು ಸೂಚನೆ ನೀಡಿದರು.

ಸಭೆಯಲ್ಲಿ ತಹಸೀಲ್ದಾರ ಸುರೇಶ ವರ್ಮಾ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಇದ್ದರು.

# ಗಣೇಶ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ : ಎಸ್.ಪಿ ಜೆ.ಹರೀಶ್

ದರು. ಹಬ್ಬವನ್ನು ಶಾಂತಿಯುತವಾಗಿ ಆಚರಣೆ ಮಾಡಬೇಕು, ಪಿಒಪಿ ಗಣೇಶನನ್ನು ಬಳಿಸಿ, ಪರಿಸರ ನಾಶ ಮಾಡದಂತೆ ನೋಡಿಕೊಳ್ಳಬೇಕು, ಕುಡಿಲು ಬಳಸುವ ನೀರನ್ನು ಬಿಟ್ಟು ಉಳಿದ ಕಡೆ ಗಣಪತಿಯನ್ನು ವಿಸರ್ಜನೆ ಮಾಡಬೇಕು ಎಂದರು

ಈ ಸಂದರ್ಭದಲ್ಲಿಡಿವೈ ಎಸ್ ಪಿ ದತ್ತಾತ್ರೇಯ ಕಾರ್ನಾಡ್,ಉಪ ತಹಸೀಲ್ದಾರ್ ಬಸವರಾಜ ಝುಳಕಿಮಠ, ಅಬಕಾರಿ ಇನ್ಸ್ಪೆಕ್ಟರ್ ಲಕ್ಷ್ಮಿದೇವಿ, ಪಿಐ ಪುಂಡಲೀಕ ಪಟಾತಾರ್,ಪುರಸಭೆ ಮುಖ್ಯಾಧಿಕಾರಿ ರವಿ ಸಿರಗುಪ್ಪಿ, ಕೆಬಿಇ ಎಇಇ ಬೆನ್ನಪ್ಪ ಕರಿಬಂಟನಾಳ,ಅರಣ್ಯಧಿಕಾರಿ ಸುಬಾಸಚಂದ್ರು ನಾಯಕ, ಸೇರಿ ಇನ್ನೂ ಮುಂತಾದ ಅಧಿಕಾರಿಗಳು, ನಗರದ ಜನತೆ ಇದ್ದರು

# ಸರ್ಕಾರಿ ಬಾಲಕರ ಪ್ರೌಢ ಶಾಲೆ ಎಸ್‌ಡಿಎಂಸಿ ಅಧ್ಯಕ್ಷರಾಗಿ ಮಹ್ಮದ್ ರಫಿ ಆಯ್ಕೆ

**ಯುವ ಮಾರ್ಗ ಸುದ್ದಿ**

**ಸಿರವಾರ,ಆ.22–**ಪಟ್ಟಣದ ಸರ್ಕಾರಿ ಬಾಕಲರ ಪ್ರೌಢ ಶಾಲೆಯ ನೂತನ ಶಾಲಾ ಮೇಲುಸ್ತುವಾರಿ ಸಮಿತಿ ಅಧ್ಯಕ್ಷರಾಗಿ ಮಹ್ಮದ್ ರಫಿ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಈ ಹಿಂದೆ ಹನುಮೇಶ ಬೇರಿ ಅವರು ಅಧ್ಯಕ್ಷರಾಗಿದ್ದರು 7 ಜನ ಪಾಲಕರ ಮಕ್ಕಳು ಎಸ್.ಎಸ್.ಎಲ್.ಸಿ ತೇರ್ಗಡೆಯಾಗಿ ಹೋಗಿದ್ದರಿಂದ ಎಸ್.ಡಿ.ಎಂ.ಸಿ ಯ 7 ಸದಸ್ಯ ಸ್ಥಾನಗಳು ಖಾಲಿಯಾಗಿದ್ದವು ಆ ಸ್ಥಾನಗಳಿಗೆ ನೂತನ ಸದಸ್ಯರ ನೇಮಕಚಾಗಿದ್ದು ಎಸ್.ಡಿ.ಎಂ.ಸಿ ಅಧ್ಯಕ್ಷರಾಗಿದ್ದ ಹನುಮೇಶ ಬೇರಿ ಅವರ ವಿರುದ್ಧ ಎಲ್ಲಾ ಸದಸ್ಯರು ಅವಿಶ್ವಾಸ ಗೊತ್ತುವಳಿ ಮಂಡಿಸಿದ್ದರಿಂದ ಆ ಸ್ಥಾನಕ್ಕೆ ನೂತನ ಅಧ್ಯಕ್ಷರಾಗಿ ಮಹ್ಮದ್ ರಫಿ ಅವರು ಅವಿರೋಧ ಆಯ್ಕೆಯಾದರು, ಉಪಾಧ್ಯಕ್ಷರಾಗಿ



ಪ್ರಭಾ ಹನುಮಂತ ಅವರು ಆಯ್ಕೆಯಾಗಿದ್ದಾರೆ.

ಈ ಸಂದರ್ಭದಲ್ಲಿ ಮುಖ್ಯಗುರುಗಳಾದ ಗಿರಿಜಾ ಮೌನೇಶ, ಸದಸ್ಯರಾದ ಪಿ.ಕೃಷ್ಣ, ಸಿಮೋನ್, ಹನುಮಂತ ಪಿ, ಅಬ್ದುಲ್ ಗನಿ, ಶಾಂತಮ್ಮ, ಬಸವರಾಜ, ಶಿಕ್ಷಕರಾದ ಮಂಜುನಾಥ, ಡೇವಿಡ್ ಇದ್ದರು.

# ಆಳಂದ: ಭೋವಿ ಸಮಾಜದ ಹಲವರು ಬಿಜೆಪಿ ಸೇರ್ಪಡೆ



**ಯುವ ಮಾರ್ಗ ಸುದ್ದಿ**

**ಆಳಂದ,ಆ.22–**ಮತಕ್ಷೇತ್ರದಲ್ಲಿ ಚುನಾವಣೆಗೂ ಮೂರು ವರ್ಷವಿರುವಾಗಲೇ ಮುಂಚೆ ಪಕ್ಷಾಂತರ ಜೋರಾಗಿ ಜರುಗುತ್ತಿದೆ.

ಆಳಂದ ಪಟ್ಟಣದ ಭೋವಿ ಸಮಾಜದ ಹಲವರು ಮಾಜಿ ಶಾಸಕ ಸುಭಾಷ ಆರ್ ಗುತ್ತೇದಾರ ಸಮ್ಮುಖದಲ್ಲಿ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾದರು. ಪಕ್ಷಕ್ಕೆ ಸೇರ್ಪಡೆಯಾದ ಮುಖಂಡರನ್ನು ಬಿಜೆಪಿ ಪಕ್ಷದ ಶಾಲು ಬಾವುಟ ನೀಡಿ ಪಕ್ಷಕ್ಕೆ ಸೇರ್ಪಡೆ ಮಾಡಿಕೊಂಡರು.

ಆಳಂದ ಮತಕ್ಷೇತ್ರದಲ್ಲಿ ಜನಸಾಮಾನ್ಯರ ಪಾಡು ಹೇಳತೀರದಾಗಿದೆ. ಎಲ್ಲ ರಂಗದಲ್ಲಿ ಭ್ರಷ್ಟಾಚಾರ ತಾಂಡವಾಡುತ್ತಿದೆ. ಶಾಸಕರು ಕ್ಷೇತ್ರದಲ್ಲಿ ಇದ್ದು ಸಮಸ್ಯೆ ಬಗೆ ಹರಿಸುತ್ತಿಲ್ಲ ಇದರಿಂದ ಜನಸಾಮಾನ್ಯರು ರೋಸಿ ಹೋಗಿದ್ದಾರೆ ಹೀಗಾಗಿ ಜನ ಬದಲಾವಣೆ ಬಯಸಿ ಬಿಜೆಪಿ ಸೇರ್ಪಡೆಯಾಗುತ್ತಿದ್ದಾರೆ ಎಂದು ಹೇಳಿದರು.

ಭೋವಿ ಸಮಾಜದ ಯಲ್ಲಪ್ಪ ದಂಡಗುಲೆ, ನಾಗನಾಥ ದಂಡಗುಲೆ, ಶ್ಯಾಮರಾವ ದಂಡಗುಲೆ, ಯಲ್ಲಪ್ಪ ದಂಡಗುಲೆ, ಈರಣ್ಣ ನಿಂಬಾಳಕರ, ಯಲ್ಲಪ್ಪ ಪಾತ್ರೋಟ, ಹುಲಗಪ್ಪ ಅಲಕುಂಟೆ, ತಿಮ್ಮಣ್ಣ ದಂಡಗುಲೆ, ಹಣಮಂತ ಅಲಕುಂಟೆ, ರಾಮಣ್ಣಾ ಅಲಕುಂಟೆ, ಸಾಗರ ಬನಪಟ್ಟೆ, ಸಂತೋಷ ದಂಡಗುಲೆ, ಸಿದ್ದು ಪಾತ್ರೋಟ, ಅವಿನಾಶ ಬನಪಟ್ಟೆ, ರಾಜು ಮಂಜುಳೆ, ವೆಂಕಟೇಶ ಕೆರೆಮನೆ, ಭರಮಣ್ಣ ದಂಡಗುಲೆ, ಬಸವರಾಜ ಪಾತ್ರೋಟ, ತಿರುಪತಿ ದಂಡಗುಲೆ, ಕೃಷ್ಣಾ ಕುಸಾಳಕರ, ಯಲ್ಲಪ್ಪ ದಂಡಗುಲೆ ಕಾಂಗ್ರೆಸ್ ತೊರೆದು ಬಿಜೆಪಿ ಸೇರ್ಪಡೆಯಾದರು.

ಈ ಸಂದರ್ಭದಲ್ಲಿ ಮಂಡಲ ಬಿಜೆಪಿ ಅಧ್ಯಕ್ಷ ಮಲ್ಲಿಕಾರ್ಜುನ ಕಂದಗೂಳೆ, ಪುರಸಭೆ ಸದಸ್ಯ ಶಿವಪುತ್ರ ನಡಗೇರಿ, ಮುಖಂಡರಾದ ಬಾಬಾಸಾಹೇಬ ಪಾಟೀಲ, ಮಾಣಿಕ ಜಾಧವ, ಮಹಾಂತೇಶ ಪೂಜಾರಿ, ಪ್ರಕಾಶ ತೋಳೆ, ಅಣ್ಣಪ್ಪ ದಂಡಗುಲೆ, ಕನಕಪ್ಪ ಬಂಡಿವಡ್ಡರ, ಭರಮವ್ವಾ, ಅಶ್ಪಾಕ್ ಶೇಖ್, ಇಸ್ಮಾಯಿಲ್ ಜಮಾದಾರ ಸೇರಿದಂತೆ ಇತರರು ಇದ್ದರು.

# ಅನಧಿಕೃತ ವೈದ್ಯಕೀಯ ವೃತ್ತಿಯ ಕ್ಲಿನಿಕ್‌ಗಳ ಮೇಲೆ ದಾಳಿ, ಪರಿಶೀಲನೆ

**ಕಲಬುರಗಿ,ಆ.22–**ನಗರದಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ವೈದ್ಯಕೀಯ ವೃತ್ತಿಯ ಕ್ಲೀನಿಗಳ ಮೇಲೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ತಂಡ ದಾಳಿ ನಡೆಸಿ ಪರಿಶೀಲನೆ ನಡೆಸಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ್ ಅವರ ನೇತೃತ್ವದಲ್ಲಿ ಜಿಲ್ಲಾ ಆಯುಷ್ ಅಧಿಕಾರಿ ಡಾ.ಗಿರಿಜಾದೇವಿ ನಿಗ್ಗುಡಗಿ, ಜಿಲ್ಲಾ ಆಸ್ಪತ್ರೆಯ ಚರ್ಮ ರೋಗ ತಜ್ಞರಾದ ಡಾ.ಪ್ರಸಾದ್, ತಾಲೂಕ ಆರೋಗ್ಯ ಅಧಿಕಾರಿ ಡಾ.ಮಾರುತಿ ಕಾಂಬ್ಳೆ, ಜಿಲ್ಲಾ ದಂತ ಬಾಯಿ ಆರೋಗ್ಯ ಅಧಿಕಾರಿ ಡಾ.ಸಂಧ್ಯಾ ಕನೇಕರ್, ಜಿಲ್ಲಾ ಕೇಸ್ ವರ್ಕರ್ ಆಕಾಶ್, ತಾಲೂಕ ಕೇಸ್ ವರ್ಕರ್ ಪ್ರಕಾಶ್ ಹಾಗೂ ಇನ್ನಿತರ ಅಧಿಕಾರಿಗಳು ಮತ್ತು ಸಿಬ್ಬಂದಿ ದಾಳಿ ನಡೆಸಿ ಕ್ಲಿನಿಕ್ ನಡೆಸುವುದರ ಪ್ರಮಾಣ ಪತ್ರ ಪರಿಶೀಲಿಸಿದರು.

ಚರ್ಮರೋಗ ವೈದ್ಯಕೀಯ ಪದವಿ ಪಡೆಯದೇ ಕೆಪಿಎಂಇ



ಕಾಯ್ದೆಯಡಿಯಲ್ಲಿ ನೋಂದಣಿಯಾದ ಹಾಗೂ ನೋಂದಣಿಯಾಗದ ಚರ್ಮರೋಗ ಚಿಕಿತ್ಸೆ ಪ್ರಾಪ್ತಿಗೊಳಪಡುವ ಖಾಸಗಿಯಾಗಿ ವೈದ್ಯಕೀಯ ವೃತ್ತಿ ನಡೆಸುತ್ತಿರುವವರ ಹಾಗೆ ಯಾವುದೆ ತರಬೇತಿ ಇಲ್ಲದೆ, ಹಾಗೆ ಪ್ರಮಾಣ ಪತ್ರ ಇಲ್ಲದ ಕ್ಲಿನಿಕ್ ನಡೆಸುತ್ತಿರುವವರ ವಿರುದ್ಧ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಶರಣಬಸಪ್ಪ ಕ್ಯಾತನಾಳ್ ತಿಳಿಸಿದರು.

# ರೈತರ ಹಬ್ಬ ಹೋಳ್ವಕ್ಕೆ ಭರದ ಸಿದ್ಧತೆ

**ಕಮಲನಗರ,ಅ.22–** ರೈತರ ಹಬ್ಬ ಹೋಳ್ವಕ್ಕೆ ಭರದ ಸಿದ್ಧತೆಗಾಗಿ ರೈತರು ಎತ್ತುಗಳು ಮತ್ತು ಎಮ್ಮೆಗಳ ಶೃಂಗಾರ ವಸ್ತುಗಳನ್ನು ಖರೆದಿಯಲ್ಲಿ ತೊಡಗಿರುವ ದೃಶ್ಯ ಪಟ್ಟಣದಲ್ಲಿ ಗುರುವಾರ ಕಂಡು ಬಂತು.



ಹೋಳ್ಳ ಅಮಾವಾಸ್ಯೆ ರೈತರು ಸಂಭ್ರಮ ಪಡುವ ಹಬ್ಬವಾಗಿದೆ, ಈ ಹಬ್ಬದ ಪ್ರಯುಕ್ತ ರೈತರು ವರ್ಷವಿಡಿ ತನ್ನ ಹೊಲದಲ್ಲಿ ದುಡಿದಿರುವ ಎತ್ತುಗಳಿಗೆ ಧನ್ಯವಾದ ಹೇಳುವ ಹಬ್ಬ, ನಿಮಿತ್ಯ ಎತ್ತುಗಳನ್ನು ಸಿಂಗಾರ ಮಾಡಿಸಿ, ಹೊಸ ಮೊರಾಕಿ, ಘಂಟೆ, ಮುಗದಾರ, ಒನ್ ಬಣ್ಣ, ಕಲರ್, ದಂಡಿ, ಹೀಗೆ ಇನ್ನಿತರ ಅಲಂಕರಿಸುವ ವಸ್ತುಗಳಿಂದ ಅವುಗಳನ್ನು ಅಲಂಕರಿಸಿ ಗ್ರಾಮದ ಹನುಮಾನ ದೇವಾಲಯಕ್ಕೆ ಪ್ರದರ್ಶನ ಹಾಕಿ ಮನೆಗೆ ತಂದು ಪೂಜೆ ಮಾಡಿ ಪರಿವಾರ ಬಂದು ಬಳಗದವರಿಗೆ ರುಚಿಯಾದ ಊಟ ಸವಿದು ಸಂಭ್ರಮದಿಂದ ಆಚರಿಸುವ ಹಬ್ಬವೇ ಹೋಳ್ವ ಹಬ್ಬ.

ಈ ವರ್ಷ ಉತ್ತಮ ಬೆಳೆ ಇದ್ದ ಕಾರಣ ರೈತರು, ಒಳ್ಳೆಯ ಪ್ರಕ್ರಿಯೆ ನೀಡುತ್ತಿದ್ದಾರೆ, ರೈತರಿಗಾಗಿ ಅಂಗಡಿ ಹಾಕಿ ರೈತರಿಗೂ ಸಹಾಯವಾಗುತ್ತಿದೆ ಹಾಗೂ ನಮಗೂ ಬಂಡವಾಳಕ್ಕೆ ನಷ್ಟ ಇಲ್ಲದಂತೆ ಉತ್ತಮ ಲಾಭವಾಗುತ್ತಿದೆ ಎಂದು ಅಂಗಡಿ ಮಾಲಕ ಅವಿನಾಶ ಶಿಂದೆ ಹೇಳಿದರು.

# ನಾನು ಅಪ್ಪಟ ಕಾಂಗ್ರೆಸ್ಸಿಗ ಪಕ್ಷಕ್ಕೆ ಆಧಾರ ಸ್ತಂಭ : ಡಿಕೆಶಿ



**ಬೆಂಗಳೂರು, ಆ.22–** ನಾನು ಅಪ್ಪಟ ಕಾಂಗ್ರೆಸ್ಸಿಗ. ಹುಟ್ಟಿನಿಂದ ಕಾಂಗ್ರೆಸ್ಸಿಗ. ಜೀವ ಇರುವ ತನಕವೂ ಕಾಂಗ್ರೆಸ್ಸಿಗನಾಗಿಯೇ ಇರುತ್ತೇನೆ. ನನ್ನ ಜೀವ, ನನ್ನ ರಕ್ತ ಎಲ್ಲವೂ ಕಾಂಗ್ರೆಸ್. ನಾನೀಗ ಪಕ್ಷವನ್ನು ಮುನ್ನಡೆಸುತ್ತಿದ್ದೇನೆ. ಅದಕ್ಕೆ ಆಧಾರಸ್ತಂಭವಾಗಿ ನಿಲ್ಲುತ್ತೇನೆ ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಅವರು ಖಡಕ್ಕಾಗಿ ಹೇಳಿದ್ದಾರೆ.

ವಿಧಾನಸೌಧದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಡಿ.ಕೆ.ಶಿವಕುಮಾರ್ ಅವರು ಇಂದು ಪ್ರತಿಕ್ರಿಯೆ ನೀಡಿದರು.ವಿಧಾನಸಭೆಯಲ್ಲಿ ಆರ್‌ಎಸ್‌ಎಸ್ ಗೀತೆ ಹಾಡಿದ್ದರ ಪರಿಣಾಮ ನೀವು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಜೊತೆ ಕೈ ಜೋಡಿಸುವ ಬಗ್ಗೆ ಚರ್ಚೆಯಾಗುತ್ತಿದೆ ಎಂದು ಕೇಳಿದಾಗ ಉತ್ತರಿಸಿದ ಶಿವಕುಮಾರ್ ಅವರು, ನಾನು ಪರೋಕ್ಷವಾಗಿ, ಪ್ರತ್ಯಕ್ಷವಾಗಿ ಯಾವುದೇ ರೀತಿಯಲ್ಲೂ ಅವರ ಜೊತೆ ಕೈ ಜೋಡಿಸುವ ಪ್ರಮೇಯವೇ ಇಲ್ಲ. ನಾನು ಅಪ್ಪಟ ಕಾಂಗ್ರೆಸ್ಸಿಗ. ಜನತಾದಳ, ಬಿಜೆಪಿ ಬಗ್ಗೆ ಸಂಶೋಧನೆ ಮಾಡುತ್ತಿರುತ್ತೇನೆ. ಅದೇ ರೀತಿ ಆರ್‌ಎಸ್‌ಎಸ್ ಬಗ್ಗೆಯೂ ತಿಳಿದುಕೊಂಡಿದ್ದೇನೆ ಎಂದರು.

**ಆರ್‌ಎಸ್‌ಎಸ್ ನಿಂದ ಶಿಕ್ಷಣ ಸಂಸ್ಥೆಗಳ ಮೇಲೆ ಹಣ ಹೂಡಿಕೆ:**

ನಾನು ಪ್ರತಿಯೊಂದು ರಾಜಕೀಯ ಪಕ್ಷಗಳ ಬಗ್ಗೆಯೂ ನನ್ನದೇ ಆದ ಸಂಶೋಧನೆ ನಡೆಸಿದ್ದೇನೆ. ಆರ್‌ಎಸ್‌ಎಸ್ ರಾಜ್ಯದಲ್ಲಿ ಹೇಗೆ ತನ್ನ ಸಂಘಟನೆ ಕಟ್ಟಿತು ಎಂಬುದು ನನಗೆ ತಿಳಿದಿದೆ. ಆರ್‌ಎಸ್‌ಎಸ್ ಪ್ರತಿ ತಾಲ್ಲೂಕು, ಜಿಲ್ಲೆ ಸೇರಿದಂತೆ ಎಲ್ಲಾ ಕಡೆ ಶಿಕ್ಷಣ ಸಂಸ್ಥೆಗಳನ್ನು ತನ್ನ ತೆಕ್ಕೆಗೆ ತೆಗೆದುಕೊಳ್ಳುತ್ತಿದೆ. ಸಾಕಷ್ಟು ಹಣ ಹೂಡಿಕೆ ಮಾಡುತ್ತಿದೆ. ಮಕ್ಕಳನ್ನು ತಲುಪುವ ಕೆಲಸ ಮಾಡುತ್ತಿದೆ ಎಂದರು.

ರಾಜಕೀಯವಾಗಿ ನಾವು ಭಿನ್ನಾಭಿಪ್ರಾಯಗಳನ್ನು ಹೊಂದಿರಬಹುದು. ರಾಜಕೀಯ ವ್ಯಕ್ತಿಯಾದ ನಾನು ರಾಜಕೀಯ ಎದುರಾಳಿಗಳಲ್ಲಿ ಯಾರು ಸ್ನೇಹಿತರಿದ್ದಾರೆ, ಯಾರು ಶತ್ರುಗಳಿದ್ದಾರೆ ಎನ್ನುವುದನ್ನು ತಿಳಿಯಬೇಕಲ್ಲವೇ? ಆದ ಕಾರಣಕ್ಕೆ ಆರ್‌ಎಸ್‌ಎಸ್ ಇತಿಹಾಸ ತಿಳಿದುಕೊಂಡಿದ್ದೇನೆ ಎಂದರು.

ಕೆಲವೊಂದು ಸಂದರ್ಭದಲ್ಲಿ ಕೆಲವೊಂದು ಸಂಸ್ಥೆಗಳಲ್ಲಿ ಒಂದಷ್ಟು ಒಳ್ಳೆಯ ಗುಣಗಳಿರುತ್ತವೆ. ಅವುಗಳನ್ನೂ ನಾವು ಗಮನಿಸಬೇಕಲ್ಲವೇ? ನೇರವಾಗಿ, ದಿಟ್ಟವಾಗಿ ಮಾತನಾಡುವುದು ನಮ ಗುಣ. ಬೇರೆಯವರಲ್ಲಿರುವ ಒಳ್ಳೆಯ ಗುಣಗಳನ್ನು ಗಮನಿಸಬೇಕು. ಅದೇ ರೀತಿ ನಾವು ಮಾಡಿದ್ದೇವೆ ಎಂದು ಹೇಳಿದರು. ನಿಮಲ್ಲೂ (ಮಾಧ್ಯಮ) ಒಬ್ಬೊಬ್ಬರದು ಒಂದೊಂದು ಗುಣ. ಹಿಡಿಯಲು ಬಂದರೆ ಜಾರಿಕೊಳ್ಳುವ ಗುಣವಿದೆ. ಒಳ್ಳೆಯ ಗುಣವೂ ಇದೆ. ಅವನ್ನು ನಾವು ಗಮನಿಸಬೇಕಲ್ಲವೇ? ಎಂದು ಡಿಸಿಎಂ ಅವರು ಉದಾಹರಣೆ ಕೊಟ್ಟರು.


**ಬಿಜೆಪಿ ಠುಸ್ ಗಿರಾಕಿ:** ಬಿಜೆಪಿಯವರು ಧರ್ಮಸ್ಥಳ ಯಾತ್ರೆ ಮಾಡುತ್ತಿರುವ ಬಗ್ಗೆ ಕೇಳಿದಾಗ, ಬಿಜೆಪಿ ಒಂದು ಠುಸ್ ಗಿರಾಕಿ. ಅವರು ಮಾಡುತ್ತಿರುವುದು ರಾಜಕಾರಣ. ಹಿರಿಯ ಅಧಿಕಾರಿ ಮೊಹಾಂತಿ ಅವರ ನೇತೃತ್ವದಲ್ಲಿ ತನಿಖಾ ತಂಡವು ಅಚ್ಚುಕಟ್ಟಾಗಿ ತಮ ಕೆಲಸ ನಿರ್ವಹಿಸುತ್ತಿದೆ ಎಂದರು.

**ಆಧಾರವಿಟ್ಟುಕೊಂಡು ಆರೋಪ ಮಾಡಲಿ:**

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಬಿ.ಎಲ್. ಸಂತೋಷ್ ಬಗ್ಗೆ ಆರೋಪ ಮಾಡಿದವನನ್ನು (ಮಹೇಶ್ ಶೆಟ್ಟಿ ತಿಮರೋಡಿ) ಒದ್ದು ಒಳಗೆ ಹಾಕಲಾಗಿದೆ. ಆರೋಪ ಮಾಡಲು ಆತನ ಬಳಿ ದಾಖಲೆ ಏನಿದೆ? ನಮ ನಡುವೆ ರಾಜಕೀಯವಾಗಿ ಸಾಕಷ್ಟು ಭಿನ್ನಾಭಿಪ್ರಾಯ ಹೊಂದಿರಬಹುದು ಆದರೆ ನಮ ವಿರೋಧಿಗಳ ಬಗ್ಗೆ ಏನೇನೋ ಮಾತನಾಡುತ್ತಾನೆ ಎಂದು ನಾವು ಖುಷಿಪಡುವುದಲ್ಲ ಎಂದು ತಿಳಿಸಿದರು.

ಇಂದು ಅವರ ಬಗ್ಗೆ ಮಾತನಾಡಿದವರು, ನಾಳೆ ನಮ ಬಗ್ಗೆಯೂ ಮಾತನಾಡುತ್ತಾರೆ. ಈ ಹಿಂದೆ ಮುಖ್ಯಮಂತ್ರಿಯವರು ಹಾಗೂ ನನ್ನ ವಿರುದ್ಧ ಸುಳ್ಳು ಆರೋಪ ಮಾಡಿದ್ದಾರೆ. ಈ ರಾಜ್ಯದಲ್ಲಿ ಯಾರ ಸ್ವಾಭಿಮಾನಕ್ಕೂ ಧಕ್ಕೆ ಬರದಂತೆ ಕೆಲಸ ಮಾಡಬೇಕು. ರಾಜಕೀಯ ಮಾಡಲಿ, ರಾಜಕೀಯವಾಗಿ ಆರೋಪಗಳನ್ನು ಮಾಡಲಿ. ಆದರೆ ಆಧಾರಗಳನ್ನಿಟ್ಟುಕೊಂಡು ಆರೋಪ ಮಾಡಲಿ ಎಂದರು. ಧರ್ಮಸ್ಥಳದಲ್ಲಿ ಸಂಗ್ರಹವಾಗುವ ಹುಂಡಿ ಹಣದ ಲೆಕ್ಕ ಕೊಡಬೇಕು ಎನ್ನುವ ಸಮಾನ ಮನಸ್ಕ ವೇದಿಕೆಯ ಆಗ್ರಹದ ಬಗ್ಗೆ ಕೇಳಿದಾಗ, ಇದನ್ನು ನೋಡಲು ಆದಾಯ ತೆರಿಗೆ ಇಲಾಖೆಯಿದೆ ಎಂದರು.

# ಕುರಿಗಾಹಿಗಳ ಮೇಲೆ ದೌರ್ಜನ್ಯ ನಡೆದರೆ ಕೇಸ್ ಪರಿಷತ್‌ನಲ್ಲಿ ವಿಧೇಯಕ ಅಂಗೀಕಾರ



**ಬೆಂಗಳೂರು, ಆ.22–**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಅಲೆಮಾರಿ ಕುರಿಗಾಹಿಗಳ ವಿಧೇಯಕಕ್ಕೆ ಮೇಲ್ಮನೆಯಲ್ಲಿ ಅನುಮೋದನೆ ಸಿಕ್ಕಿದ್ದು, ಇನ್ನುಮುಂದೆ ಕುರಿಗಾಹಿಗಳ ಮೇಲೆ ದೌರ್ಜನ್ಯವೆಸಗಿದರೆ ಸರ್ಕಾರ ಕೇಸು ಜಡಿಯಲಿದೆ.

ವಿಧಾನ ಪರಿಷತ್ತಿನ ಶಾಸನ ರಚನೆ ಕಲಾಪದಲ್ಲಿಂದು ಪಶುಸಂಗೋಪನಾ ಸಚಿವ ಕೆ.ವೆಂಕಟೇಶ್ ಅವರು, ರಾಜ್ಯದಲ್ಲಿ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ ಕ್ಷೇಮಾಭಿವೃದ್ಧಿಗೆ ಕ್ರಮ ಹಾಗೂ ಅವರ ವಿರುದ್ಧ ದೌರ್ಜನ್ಯಗಳ ಅಪರಾಧ ಎಸಗುವುದನ್ನು ತಡೆಗಟ್ಟುವ 2025ನೇ ಸಾಲಿನ ಕರ್ನಾಟಕ ಸಾಂಪ್ರದಾಯಿಕ ಅಲೆಮಾರಿ ಕುರಿಗಾಹಿಗಳ (ಕ್ಷೇಮಾಭಿವೃದ್ಧಿ ಕ್ರಮಗಳು ಮತ್ತು ದೌರ್ಜನ್ಯಗಳ ವಿರುದ್ಧದ ರಕ್ಷಣೆ) ವಿಧೇಯಕ ಮಂಡಿಸಿದರು.

ಬಳಿಕ ವಿವರಣೆ ನೀಡಿದ ಸಚಿವರು, ವಲಸೆ ಹೋದಾಗ ಕುರಿತು ಹೊತ್ತುಕೊಂಡು ಹೋಗುವುದು, ದೌರ್ಜನ್ಯ ನಡೆಸುವುದು, ಅತ್ಯಾಚಾರ ಎಸಗುವ ಕೃತ್ಯಗಳು ನಡೆದಿವೆ. ಹೀಗಾಗಿ, ಇಂತಹವುಗಳನ್ನು ತಡೆಯಲು ಹಾಗೂ ಅವರಿಗೆ ಭದ್ರತೆ ಒದಗಿಸಲು ವಿಧೇಯಕ ಪ್ರಸ್ತಾಪಿಸಲಾಗಿದೆ ಎಂದು ವಿವರಿಸಿದರು.ಜತೆಗೆ ಫಲಾನುಭವಿಯಾಗಿ ನೋಂದಣಿ ಮಾಡಿಕೊಂಡವರಿಗೆ ಕೈಗೆಟಕುವ ಬೆಲೆಯಲ್ಲಿ ವಸತಿಗಾಗಿ ಭೂಮಿ ಮಂಜೂರಾತಿ, ಜೀವವಿಮೆ, ಆರೋಗ್ಯವಿಮೆ, ಪಶುವಿಮೆ, ಆರೋಗ್ಯ ಮತ್ತು ಶೈಕ್ಷಣಿಕ ಸೌಲಭ್ಯಗಳು, ಕೌಶಲ್ಯಗಳ ಉನ್ನತೀಕರಣ, ಆಹಾರ ಭದ್ರತೆ, ಕಲ್ಯಾಣ ಕಾರ್ಯಕ್ರಮ ನೀಡಲಾಗುವುದು.

ಅಲ್ಲದೆ ಜಾನುವಾರುಗಳಿಗೆ ಲಸಿಕೆ, ಚಿಕಿತ್ಸೆ, ಕುರಿಗಾಹಿಗಳ ಉತ್ಪನ್ನಗಳಿಗೆ ಮಾರಾಟ ಬೆಂಬಲ, ನಷ್ಟದ ಸಂದರ್ಭದಲ್ಲಿ ನಷ್ಟ ಪರಿಹಾರ ಮೊದಲಾದ ಸೌಲಭ್ಯಗಳನ್ನು ಫಲಾನುಭವಿಗಳಿಗೆ ಒದಗಿಸಲಾಗುತ್ತದೆ ಎಂದರು.

ವಿಪಕ್ಷ ಬಿಜೆಪಿಯ ಹಿರಿಯ ಸದಸ್ಯ ಎಚ್.ವಿಶ್ವನಾಥ್ ಮಾತನಾಡಿ, ಕುರಿಗಾಹಿಗಳ ಬಗ್ಗೆ ಸರ್ಕಾರಕ್ಕೆ ಕಳಾಜಿ ಇದೆ. ಹೀಗಾಗಿ ಈ ವಿಧೇಯಕ ತಂದಿದ್ದಾರೆ. ಆದರೆ, ಶೀಘ್ರವಾಗಿ ಕುರಿಗಾಹಿಗಳ ಜತೆಗೆ ಸಭೆ ನಡೆಸಬೇಕು. ಹಲವು ಸಮಸ್ಯೆಗಳಿಗೆ ಪರಿಹಾರ ದೊರೆಯಬೇಕು ಎಂದು ಹೇಳಿದರು.

ಇನ್ನೂ, ಕುರಿಗಳಿಗೆ ಬರುವ ಹಲವಾರು ಸಾಂಕ್ರಾಮಿಕ ರೋಗಗಳ ಪೈಕಿ ಜಂತುಹುಳಗಳ ಕಾಟವೂ ಒಂದು. ಇವುಗಳು ಜಾಸ್ತಿಯಾದ ಪಕ್ಷದಲ್ಲಿ ಕುರಿಗಳಲ್ಲಿ ಪೌಷ್ಟಿಕಾಂಶಗಳ ಕೊರತೆಯುಂಟಾಗಿ ಸಾವನ್ನಪ್ಪುತ್ತವೆ. ಆದರೆ, ಹೊರಗಡೆ ಇದಕ್ಕೆ ಔಷಧಿಗಳು ದೊರೆಯುತ್ತಿಲ್ಲ. ಮಾತ್ರೆಗಳು ಇಲ್ಲ. ಸರ್ಕಾರ ಇತ್ತ ನೋಡಲಿ ಎಂದು ಸದನದ ಗಮನ ಸೆಳೆದರು.

ಇದೇ ವಿಧೇಯಕ ಕುರಿತು ಕಾಂಗ್ರೆಸ್ ಸದಸ್ಯೆ ಉಮಾಶ್ರೀ, ನಾಗರಾಜ್ ಯಾದವ್ ಸೇರಿದಂತೆ ಇನ್ನಿತರರು ಸ್ವಾಗತಿಸಿದರು.ಬಳಿಕ ಸಭಾಪತಿ ಪೀಠದಲ್ಲಿದ್ದ ಭಾರತಿ ಶೆಟ್ಟಿ ಅವರು ಧ್ವನಿಮತದ ಮೂಲಕ ಈ ವಿಧೇಯಕ ಅಂಗೀಕರಿಸಲಾಗಿದೆ ಎಂದು ಪ್ರಕಟಿಸಿದರು.

# ರಾಷ್ಟ್ರೀಯ ಏಕತೆ ಉಂಟಾಗಲು ಸದ್ಭಾವನೆ ಅಗತ್ಯ



**ಕಲಬುರಗಿ ,ಅ.22–** ಎಲ್ಲಾ ಧರ್ಮಗಳ ಭಾರತೀಯರ ನಡುವೆ ರಾಷ್ಟ್ರೀಯ ಏಕತೆ, ಶಾಂತಿ, ಸಹಾನುಭೂತಿ ಮತ್ತು ಕೋಮು ಸೌಹಾರ್ದತೆಯನ್ನು ಉತ್ತೇಜಿಸಲು ಸದ್ಭಾವನಾ ಅಗತ್ಯವಾಗಿದೆ ಎಂದು ಉಪನ್ಯಾಸಕ ಎಚ್.ಬಿ. ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಬುಧವಾರ ಸಂಜೆ ಜರುಗಿದ 'ರಾಷ್ಟ್ರೀಯ ಸದ್ಭಾವನಾ ದಿನಾಚರಣೆ'ಯಲ್ಲಿ ಪ್ರತಿಜ್ಞೆ ವಿಧಿ ಬೋಧಿಸಿ, ನಂತರ ಅವರು ಮಾತನಾಡುತ್ತಿದ್ದರು.

ಸದ್ಭಾವನಾ ದಿನದ ಪ್ರಮುಖ ವಿಷಯವೆಂದರೆ, ವಿವಿಧ ನಂಬಿಕೆಗಳು ಮತ್ತು ಸಂಸ್ಕೃತಿಗಳ ಜನರಲ್ಲಿ ರಾಷ್ಟ್ರೀಯ ಏಕತೆ ತರುವುದಾಗಿದೆ. ಎಲ್ಲರಲ್ಲಿ ಸದ್ಭಾವನಾ ಗುಣ ಬೆಳೆಸಿಕೊಳ್ಳಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ದತ್ತು ಹಡಪದ, ಡಾ.ರಾಜಶೇಖರ ಪಾಟೀಲ್, ಶಿವಯೋಗೆಪ್ಪಾ ಎಸ್. ಬಿರಾದಾರ, ಸುಸ್ಮಿತಾ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಅನನ್ಯಭಟ್ ನಾಪತ್ತೆ ಪ್ರಕರಣ : ಸುಜಾತ ಭಟ್‌ಗೆ ಎಸ್‌ಐಟಿ ನೋಟೀಸ್



**ಬೆಂಗಳೂರು,ಆ.22–** ಅನನ್ಯಭಟ್ ನಾಪತ್ತೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಎಸ್‌ಐಟಿ, ಹೆಚ್ಚಿನ ವಿವರ ನೀಡುವಂತೆ ದೂರುದಾರರಾದ ಸುಜಾತಾಭಟ್ ಅವರಿಗೆ ನೋಟೀಸ್ ನೀಡಿದೆ.

ಧರ್ಮಸ್ಥಳ ಸುತ್ತಮುತ್ತ ನೂರಾರು ಶವಗಳನನು ಹೂಳಲಾಗಿದೆ ಎಂಬ ಪ್ರಕರಣ ದಿನಕ್ಕೊಂದು ಸ್ವರೂಪ ಪಡೆದುಕೊಳ್ಳುತ್ತಿರುವ ನಡುವೆಯೇ ವೈದ್ಯಕೀಯ ವಿದ್ಯಾರ್ಥಿನಿ ಅನನ್ಯಭಟ್ ನಾಪತ್ತೆ ಪ್ರಕರಣ ಮತ್ತೆ ಮುನ್ನೆಲೆಗೆ ಬಂದಿದೆ.ಸುಜಾತಾಭಟ್ ಎಂಬುವವರು ತಮ ಮಗಳು ಅನನ್ಯಭಟ್ ಕಾಣೆಯಾಗಿರುವ ಬಗ್ಗೆ ಧರ್ಮಸ್ಥಳ ಪೊಲೀಸ್ ಠಾಣೆಗೆ ಜು.15 ರಂದು ದೂರು ನೀಡಿದ್ದರು.

ಈ ಪ್ರಕರಣವನ್ನು ಪೊಲೀಸ್ ಮಹಾ ನಿರ್ದೇಶಕರಾದ ಸಲೀಂ ಅವರು ಹೆಚ್ಚಿನ ತನಿಖೆಗಾಗಿ ಎಸ್‌ಐಟಿಗೆ ವಹಿಸಿದ್ದಾರೆ.ಈಗಾಗಲೇ ಈ ಪ್ರಕರಣದ ಪ್ರಾಥಮಿಕ ತನಿಖೆ ನಡೆಸಿರುವ ಎಸ್‌ಐಟಿ, ಸುಜಾತಾಭಟ್ ಅವರ ಹಿನ್ನೆಲೆ,ಕುಟುಂಬದ ಮಾಹಿತಿಗಳನ್ನು ಸಂಗ್ರಹಿಸಿರುವುದಲ್ಲದೇ, ಈ ಹಿಂದೆ ಸುಜಾತಾ ಅವರು ಯಾವ ಯಾವ ಸ್ಥಳಗಳಲ್ಲಿ ವಾಸವಾಗಿದ್ದರು, ಯಾವ ಕೆಲಸ ಮಾಡುತ್ತಿದ್ದರು,ಇವರು ಯಾರ ಜೊತೆಯಲ್ಲಿ ವಾಸವಾಗಿದ್ದರು ಎಂಬಿತ್ಯಾದಿ ಪ್ರಾಥಮಿಕ ಮಾಹಿತಿಗಳನ್ನು ಪಡೆದುಕೊಂಡಿದೆ.

ಈ ಪ್ರಕರಣದ ಹೆಚ್ಚಿನ ಮಾಹಿತಿಗಾಗಿ ಸುಜಾತಾಭಟ್ ಅವರಿಗೆ ಎಸ್‌ಐಟಿ ಕಚೇರಿಗೆ ಬಂದು ವಿವರ ನೀಡುವಂತೆ ಅವರಿಗೆ ನೋಟೀಸ್ ನೀಡಿದೆ.ಒಂದು ವೇಳೆ ವಿಚಾರಣೆಗೆ ಅವರು ಹಾಜರಾದರೇ ಅನನ್ಯಭಟ್ ನಾಪತ್ತೆ ಪ್ರಕರಣಕ್ಕೆ ಸಂಬಂಧಿಸಿದಂತೆ ಹಲವು ಮಾಹಿತಿಗಳು ಲಭ್ಯವಾಗಲಿವೆ.

ಈ ನಡುವೆ ಸುಜಾತಾಭಟ್ ಅವರು ತಮ ಮಗಳು ಅನನ್ಯಭಟ್ ಎಂದು ತೋರಿಸಿರುವ ಫೋಟೋ ಗೊಂದಲ ಮೂಡಿಸಿದ್ದು, ಆ ಫೋಟೋದಲ್ಲಿರುವುದು ತಮ ಸಹೋದರಿ ವಾಸಂತಿ ಎಂದು ಮಡಿಕೇರಿಯ ವ್ಯಕ್ತಿಯೊಬ್ಬರು ಸುದ್ದಿಗಾರರಿಗೆ ಹೇಳಿದ್ದಾರೆ. ಸುಜಾತಾಭಟ್ ಅವರಿಗೆ ಮಕ್ಕಳಿರಲಿಲ್ಲ ಎಂದು ಸಂಬಂಧಿಕರು ಹೇಳಿದ್ದಾರೆ. ಈ ಎಲ್ಲಾ ಗೊಂದಲಗ ಬಗ್ಗೆ ಸುಜಾತಾಭಟ್ ಅವರು ಎಸ್‌ಐಟಿ ಮುಂದೆ ವಿಚಾರಣೆಗೆ ಹಾಜರಾಗಿ ಮಾಹಿತಿ ನೀಡಿದರೆ ಇನ್ನಷ್ಟು ವಿವರಗಳು ಲಭ್ಯವಾಗಲಿವೆ.

# ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕೈಜೋಡಿಸಿ : ಪಾಟೀಲ




**ಔರಾದ್,ಅ.22–**ಆರೋಗ್ಯಕರ ಬೆಳವಣಿಗೆ ರೂಢಿಸಿಕೊಂಡು ಅಪೌಷ್ಟಿಕತೆ ತಡೆಯಲು ಮಕ್ಕಳಲ್ಲಿ ನೈರ್ಮಲ್ಯ ಮತ್ತು ಪರಿಸರ ಜಾಗೃತಿ ಅತ್ಯಾವಶ್ಯಕ ಎಂದು ತಹಸೀಲ್ದಾರ್ ಮಹೇಶ ಪಾಟೀಲ್ ಅಭಿಪ್ರಾಯಪಟ್ಟರು.

ತಾಲೂಕಿನ ಎಕಲಾರ ಪ್ರಾಥಮಿಕ ಶಾಲೆಯಲ್ಲಿ ಗುರುವಾರ ಎಕಲಾರ ಸರ್ಕಾರಿ ಪ್ರಾಥಮಿಕ ಶಾಲೆ ಹಾಗೂ ವಾಟರ್‌ಶೆಡ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ನಡೆದ ಸ್ವಚ್ಛತೆಬಕಿರು ನಾಟಕ ಪ್ರದರ್ಶನ ಹಾಗೂ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಶಿಕ್ಷಕರು ಮಕ್ಕಳಲ್ಲಿ ಶುಚಿತ್ವದ ಕುರಿತು ತಿಳಿವಳಿಕೆ ಮೂಡಿಸಿ, ಸ್ವಸ್ಥ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು. ಬಯಲು ಶೌಚಮುಕ್ತ ಗ್ರಾಮಗಳೆಂದು ಘೋಷಣೆಗಳಾಗಿದ್ದರೂ ಕೂಡ ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ಅನುಷ್ಠಾನವಾಗುತ್ತಿಲ್ಲ.

ಸ್ವಚ್ಛತೆ ಬದುಕಿನ ಭಾಗವಾಗಬೇಕು. ಯಾವುದೇ ಒಂದು ದಿನಕ್ಕೆ ಸೀಮಿತಗಿರದೆ ನಿತ್ಯ ನಿರಂತರ ಸ್ವಚ್ಛತೆ, ನೀರಿನ ಮಿತ ಬಳಕೆಯ ಕುರಿತು ಕಾಳಜಿವಹಿಸಬೇಕು. ಅಂತರ್ಜಲ ಸಂರಕ್ಷಿಸುವ ನಿಟ್ಟಿನಲ್ಲಿ ಸಂಸ್ಥೆ ಮಾಡುತ್ತಿರುವ ಕಾರ್ಯ ಶ್ಲಾಘನೀಯ ಎಂದರು. ಸಂಪನ್ಮೂಲ ವ್ಯಕ್ತಿ ರಾಜೇಂದ ಮಾಳಿ ಮಾತನಾಡಿ, ನೀರು ನಮಗೆ ದೊರೆತ ಅತ್ಯಮೂಲ್ಯ ಆಸ್ತಿ, ಅದನ್ನು ಸಂರಕ್ಷಿಸಲು ವಾಟರ್ ಶೆಡ್ ಸಂಸ್ಥೆಯ ಯೋಜನೆಗಳು ತುಂಬ ಉಪಯುಕ್ತವಾಗಿವೆ. ವೈಯಕ್ತಿಕ ಸ್ವಚ್ಛತೆಯ ಜೊತೆಗೆ ಪರಿಸರ ಸ್ವಚ್ಛವಾಗಿಡುವುದು ಅತಿ ಮುಖ್ಯ ಎಂದರು.

ಬಸವಕಲ್ಯಾಣ ಜೈ ಭವಾನಿ ಕಲೆ ಮತ್ತು ಸಾಂಸ್ಕೃತಿಕ ಮಹಿಳಾ ಸಂಘದ ವಿಜಯಲಕ್ಷ್ಮಿ, ಡಿಲೆಮಾ ಅಣದೂರ, ಮಧುಕರ ಘೋಡಕೆ, ಯೇಸುದಾಸ್ ಅವರ ನೇತೃತ್ವದಲ್ಲಿ ನಡೆದ ಸ್ವಚ್ಛತೆ ಜಾಗೃತಿ, ಬಯಲು ಬಹಿರ್ದೆಸೆ ಸಂಬಂಧಿತ ಕಿರು ನಾಟಕಗಳು ಮಕ್ಕಳ ಮನಸೂರೆಗೊಂಡವು.

ಈ ಸಂದರ್ಭದಲ್ಲಿ ತಾಲೂಕು ಯೋಜನಾ ವ್ಯವಸ್ಥಾಪಕ ಸಿದ್ದಪ್ಪ ಭಾಲ್ಕೆ ಮಾತನಾಡಿದರು. ಕರ್ನಾಟಕ ಪ್ರಾದೇಶಿಕ ವ್ಯವಸ್ಥಾಪಕ ರಣಧೀರ ಪಾಟೀಲ್, ಎಮ್‌ಡಿಎಂಸಿ ಅಧ್ಯಕ್ಷ ಧನರಾಜ ಪಿಟ್ರೆ, ಜಗದೀಶ ಪಾಟೀಲ್, ರಿಷಿಕೇಶ ಶಿಂದೆ, ರವಿಕುಮಾರ ಮಠಪತಿ, ಕಂದಾಯ ನೀರಿಕ್ಷಕ ನರಸಿಮ್ಲು, ಸಿಆರ್‌ಪಿ ಮಹಾದೇವ ಘುಳೆ, ಕಲ್ಪನಾ ಪಾಟೀಲ್ ಮುಖ್ಯ ಶಿಕ್ಷಕ ಪ್ರಭು ಬಾಳೂರೆ, ಶಿಕ್ಷಕರಾದ ಬಾಲಾಜಿ ಅಮರವಾಡಿ, ವೀರಶೆಟ್ಟಿ ಗಾದಗೆ, ಅಂಕುಶ ಪಾಟೀಲ್, ರೂಪಾ, ಸಬೀತಾ, ಕಾವೇರಿ, ಸುರೇಖಾ ಸೇರಿದಂತೆ ಶಾಲಾ ಮಕ್ಕಳು ಗ್ರಾಮಸ್ಥರು ಉಪಸ್ಥಿತರಿದ್ದರು.

# ಗಾಳಿ ಸುದ್ದಿಗೆ ಕಿವಿ ಕೊಡಬೇಡಿ : ಡಿವೈಎಸ್ಪಿ



**ಕೊಟ್ಟೂರು,.ಆ.22–** ಸಾಮಾಜಿಕ ಜಾಲ ತಾಣಗಳಲ್ಲಿ ಕೆಲವೊಂದು ಧರ್ಮ, ಧರ್ಮಗಳ ನಡುವೆ ಅಶಾಂತಿ ಸೃಷ್ಟಿಸುವಂತಹ ಪೋಸ್ಟರ್ಗಳು ಹರಿದಾಡಿದರೆ ಅವುಗಳ ಬಗ್ಗೆ ಗಮನವನ್ನು ಕೊಡಬೇಡಿ, ಆ ಪೋಸ್ಟರ್ ಬಗ್ಗೆ ನಿಮ್ಮ ಪೊಲೀಸ್ ಠಾಣೆಯ ಹತ್ತಿರ ಹೋಗಿ ಸರಿಯೋ ತಪ್ಪು ಎಂಬುದರ ಬಗ್ಗೆ ಮಾಹಿತಿ ತಿಳಿದುಕೊಳ್ಳಿ ಎಂದು ಡಿವೈಎಸ್ಪಿ ಮಲ್ಲೇಶ ದೊಡ್ಡಮನಿ ತಿಳಿಸಿದರು.

ಪಟ್ಟಣದ ಪೊಲೀಸ್ ಠಾಣಾ ಆವರಣದಲ್ಲಿ ನಡೆದ ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬದ ಹಿನ್ನೆಲೆ ಹಮ್ಮಿಕೊಂಡಿದ್ದ ಶಾಂತಿ ಸಭೆ ಉದ್ದೇಶಿಸಿ ಮಾತನಾಡಿದರು. ಗೌರಿ ಗಣೇಶ ಹಾಗೂ ಈದ್ ಮಿಲಾದ್ ಹಬ್ಬವನ್ನು ಸೌಹಾರ್ದತೆಯ ಧರ್ಮದ ಇತಿ–ಮಿತಿಯೊಳಗೆ ಆಚರಿಸಬೇಕು ಅನ್ಯ ಧರ್ಮದವರ ಭಾವೈಕ್ಯತೆಗೆ ಧಕ್ಕೆ ಬಂದರೆ ಕಾನೂನು ಕ್ರಮ ಜರುಗಿಸಲಾಗುವುದು, ಗಣೇಶ ಪ್ರತಿಮೆ ಅಳವಡಿಸುವ ಮುನ್ನ ಎತ್ತರವಾದ ತಗಡಿನ ವ್ಯವಸ್ಥೆ ಕಲ್ಪಿಸಿಕೊಳ್ಳುವುದು ಉತ್ತಮ. ಹಾಗೇ ತಾತ್ಕಾಲಿಕವಾಗಿ ಸಿಸಿಟಿವಿ ಕಡ್ಡಾಯವಾಗಿ ಅಳವಡಿಸಬೇಕು. ದೇವರ ಹಬ್ಬಗಳಲ್ಲಿ ಅಕ್ರಮ ಚಟುವಟಿಕೆ ಮಾಡದಂತೆ ಭಕ್ತಿಯಿಂದ ಆಚರಿಸಿ. ಯಾವುದೇ ಕಾರ್ಯಕ್ರಮದ ಸಾಂಸ್ಕೃತಿಕ ಚಟುವ ಟಿಕೆಗಳನ್ನು ಸಮಯ 9.30ಕ್ಕೆ ಮುಕ್ತಾಯವಾಗಬೇಕು ಎಂದರು.

ಡಿ.ಜೆ. ವ್ಯವಸ್ಥೆ ಹಾಗೂ ಪಟಾಕಿ ಸಿಡಿಸುವುದು ನಿಷೇಧಿಸಿ ಸರ್ಕಾರ ಆದೇಶ ಹೊರಡಿಸಿದೆ ಸರ್ಕಾರದ ಹೊಸ ಹೊಸ ನಿಯಮಗಳ ಅನುಗುಣವಾಗಿ ಪ್ರತಿಯೊಬ್ಬರೂ ಪಾಲನೆ ಮಾಡುವುದು ಅತ್ಯವಶ್ಯಕ. ಗಣೇಶನ ಮೂರ್ತಿ ಅಳವಡಿಸುವವರು ಸಂಘದ ಹಾಗೂ ಸದಸ್ಯರು ವಿವರಗಳನ್ನು ನೀಡಬೇಕು. ಮೂರ್ತಿ ವಿಸರ್ಜನೆ ಮಾಡುವವರೆಗೂ ಸಂಘದ ಸ್ವಯಂ ಸೇವಕರನ್ನು ನೇಮಕ ಮಾಡುವುದು ಕಡ್ಡಾಯವಾಗಿದೆ ಎಂದರು.ಸಿಪಿಐ ದುರುಗಪ್ಪ ಮಾತಾನಾಡಿ, ಸಾಮಾಜಿಕ ಜಾಲತಾಣದಲ್ಲಿ ಅಹಿತಕರ ಪೋಸ್ಟರ್ ಗಳು ಹಾಕುವುದು ಕಾನೂನು ಬಾಹಿರ ಎಂದರು.ಇದೆ ವೇಳೆಯಲ್ಲಿ ಪಪಂ.ಮುಖ್ಯ ಅಧಿಕಾರಿ ನಸರುಲ್ಲಾ ಮಾತಾನಾಡಿ ಪರಿಸರ ಮಾಲಿನ್ಯ ನಿರ್ಮಾಣವಾಗದಂತೆ ಪ್ಲಾಸ್ಟಿಕ್ ಗಣೇಶ ಪ್ರತಿಮೆ ಮಾಡಲು ಸಂಪೂರ್ಣ ನಿಷೇಧಿಸಿದೆ ಪರವಾನಿಗೆ ಇಲ್ಲದೆ ಅನಧಿಕೃತ ಫ್ಲೆಕ್ಸ್ ಗಳನ್ನು ಅಳವಡಿಸಬಾರದು ಪ್ರತಿಯೊಬ್ಬರು ನಿಗದಿತ ಸ್ಥಳದಲ್ಲಿ ಮಾತ್ರ ಗಣೇಶವನ್ನು ವಿಸರ್ಜನೆ ಮಾಡಬೇಕು ಎಂದರು. ಬಿ.ಮರಿಸ್ವಾಮಿ, ಭರಮಪ್ಪ, ಉಜ್ಜಿನಿ ರುದ್ರಪ್ಪ, ಚೆನ್ನಪ್ಪ ಮಾತಾನಾಡಿದರು.ಪಿಎ ಗೀತಾಂಜಲಿ ಶಿಂಧೆ ಸಭೆಯನ್ನು ನಿರೂಪಿಸಿ ವಂದಿಸಿದರು.ಈ ಸಂದರ್ಭದಲ್ಲಿ ಕೆಇಬಿ ಎಇ. ಚೇತನ್, ಅಗ್ನಿಶಾಮಕದಳದ ಇನ್ಸ್ಪೆಕ್ಟರ್ ಬಸವರಾಜ್, ಗ್ರಾ.ಪಂ. ಪಿಡಿಒಗಳು, ಗ್ರಾಮಸ್ಥರು, ಊರಿನ ಮುಖಂಡರು, ಮುಂತಾದವರು ಇದ್ದರು.

# ಕಕ ಭಾಗದ ಅಭ್ಯರ್ಥಿಗಳಿಗೆ ನೇಮಕಾತಿ ಹಾಗೂ ಬಡ್ತಿಯಲ್ಲಿ ಅನ್ಯಾಯ

**ಕಲಬುರಗಿ: ಅ.22–** ರಾಜ್ಯದಲ್ಲಿ ನೇಮಕಾತಿ ಪ್ರಾಧಿಕಾರಗಳು ವಿಭಿನ್ನ ನಿಯಮಗಳ ಮುಖಾಂತರ ನೇಮಕಾತಿ ಮಾಡುತ್ತಿರುವುದರಿಂದ ಕಲ್ಯಾಣ ಕರ್ನಾಟಕದ ಭಾಗದ 371 ಜೇ ಅಭ್ಯರ್ಥಿಗಳಿಗೆ ನೇಮಕಾತಿ ಹಾಗೂ ಬಡ್ತಿ ಯಲ್ಲಿ ಭಾರಿ ಪ್ರಮಾಣದಲ್ಲಿ ಅನ್ಯಾಯವಾಗುತ್ತಿದೆ ಎಂದು ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ ನಮೋಶಿ ಇಂದು ಸದನದಲ್ಲಿ ಚುಕ್ಕೆ ಗುರುತಿನ ಪ್ರಶ್ನೆಯನ್ನು ಮಾನ್ಯ ಮುಖ್ಯಮಂತ್ರಿಗಳಿಗೆ ಮಾಡಿದರು.

ಕಲ್ಯಾಣ ಕರ್ನಾಟಕದ ಭಾಗದಲ್ಲಿ ಸಂವಿಧಾನ ವಿಶೇಷ ವಿಧಿ 371 ಜೇ ಬಂದನಂತರ ಈ ಭಾಗದ ನೇಮಕಾತಿ ಹಾಗೂ ಬಡ್ತಿ ವಿಷಯಕ್ಕೆ ಸಂಬಂಧಿಸಿದಂತೆ 2016 ರಿಂದ 2025 ರ ವರೆಗೆ ಅನೇಕ ಸುತ್ತೋಲೆಗಳನ್ನು ಸರ್ಕಾರ ಹೊರಡಿಸಿದೆ. ಈ ಎಲ್ಲ ಸುತ್ತೋಲೆ ಗಳಿಂದ ಗೊಂದಲವುಂಟಾಗಿ ಬೇರೆ ಬೇರೆ ನೇಮಕಾತಿ ಪ್ರಾಧಿಕಾರಗಳು ವಿಭಿನ್ನ ರೀತಿಯಲ್ಲಿ ನೇಮಕಾತಿ ಮಾಡಿಕೊಂಡಿದ್ದರಿಂದ ನಮ್ಮ ಭಾಗದ ಯುವಕರಿಗೆ ಭಾರಿ ಅನ್ಯಾಯವಾಗುತ್ತಿದೆ ಆದ್ದರಿಂದ ಈ ಅನ್ಯಾಯವನ್ನು ತಡೆಯಬೇಕೆಂದು ಮಾನ್ಯ ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ರಾಜ್ಯ ಸರ್ಕಾರ ಕಲ್ಯಾಣ ಕರ್ನಾಟಕ ಭಾಗಕ್ಕೆ ಇತ್ತೀಚೆಗೆ 03–06–2025 ರಂದು ಮತ್ತೊಂದು ಆದೇಶ ಹೊರಡಿಸಿದ್ದು ಈ ಆದೇಶವು ಸಹ ಬಹಳಷ್ಟು ಗೊಂದಲ ಹೊಂದಿದೆ ಸ್ಥಳಿಯ ವೃಂದ ಹಾಗೂ ಮೂಲ ವೃಂದ ಮಾಡಿ ಅದರಲ್ಲಿ ಕಂಪಾರ್ಟಮೆಂಟ್ ಮಾಡಿದ್ದು ಅವೈಜ್ಞಾನಿಕವಾಗಿದ್ದು ಇದನ್ನು ಸರಿಪಡಿಸಬೇಕು, ಎಸ್ಸಿ ಎಸ್ಟಿ ಮೀಸಲಾತಿಯನ್ನು ಹೇಗೆ ಪರಿಗಣಿಸುತ್ತೇವೆಯೋ ಅದೇ ರೀತಿ ಕಲ್ಯಾಣ ಕರ್ನಾಟಕ ಮೀಸಲಾತಿಯನ್ನು ನೇಮಕಾತಿ ಹಾಗೂ ಬಡ್ತಿ ಯಲ್ಲಿ ಪರಿಗಣಿಸಬೇಕೆಂದು ಆಗ್ರಹಿಸಿದರು ಇದಕ್ಕೆ ಉತ್ತರ ನೀಡಿದ ಮಾನ್ಯ ಮುಖ್ಯಮಂತ್ರಿಗಳು ಕಲ್ಯಾಣ ಕರ್ನಾಟಕ ಭಾಗದ ಸಚಿವರಾದ ಮಾನ್ಯ ಪ್ರಿಯಾಂಕಾ ಖರ್ಗೆ ಅವರ ನೇತೃತ್ವದಲ್ಲಿ ಕಲ್ಯಾಣ ಕರ್ನಾಟಕ ಮೀಸಲಾತಿ ಕುರಿತು ಸಚಿವ ಸಂಪುಟ ಉಪಸಮಿತಿ ರಚಿಸಲಾಗಿದ್ದು ಅವರು ಅದೇ ಭಾಗದವರಾಗಿರುವರಿಂದ ಅವರು ಸರಿ ಮಾಡುವ ವಿಶ್ವಾಸವಿದೆ ಅವರು ಈಗ ವಿದೇಶದಲ್ಲಿದ್ದು ಅವರು ಬಂದ ನಂತರ ಆ ಆದೇಶದ ಬಗ್ಗೆ ಗೊಂದಲವಿದ್ದರೆ ಅದನ್ನು ಸರಿಪಡಿಸುವ ಕೆಲಸ ಖಂಡಿತ ಮಾಡುತ್ತೇನೆ ಎಂದು ಹೇಳಿದರು ಅಷ್ಟೇ ಅಲ್ಲದೆ ಕಲ್ಯಾಣ ಕರ್ನಾಟಕ ಭಾಗಕ್ಕೆ ವಿಶೇಷ ಕಾನೂನು ನೀಡಿದ್ದು ನಮ್ಮ ಸರ್ಕಾರ ಕಲ್ಯಾಣ ಕರ್ನಾಟಕದ ನೇಮಕಾತಿ ಹಾಗೂ ಬಡ್ತಿ ಎಂದು ಅನ್ಯಾಯವಾಗಲು ಬಿಡುವುದಿಲ್ಲ ಎಂದು ಹೇಳಿದರು ನಮೋಶಿಯವರ ಸಲಹೆಯನ್ನು ನಾನು ಪರಿಗಣಿಸುತ್ತೇವೆ ಎಂದು ಹೇಳಿದರು.

ಯುವ ಮಾರ್ಗ



## ಜೆಸ್ಕಾಂನಿಂದ ನಗರದ ವಿವಿಧೆಡೆ ಆಗಸ್ಟ್ 25ರಂದು ವಿದ್ಯುತ್ ವ್ಯತ್ಯಯ

**ರಾಯಚೂರು,ಆ.22–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ವ್ಯಾಪ್ತಿಯ 110 ಕೆವಿಯಲ್ಲಿ ಎಂ.ಯು.ಎಸ್.ಎಸ್. ವಡವಟ್ಟಿ ನಿರ್ವಹಣೆ ಕೇಂದ್ರದಲ್ಲಿ ವಿದ್ಯುತ್ ಮಾರ್ಗದ ಕಾಮಗಾರಿ ಮತ್ತು ಹೊಸ ಲಿಂಕ್ ಲೈನ್ ನಿರ್ವಹಣೆ ಹಿನ್ನಲ್ಲೆಯಲ್ಲಿ ಆಗಸ್ಟ್ 25ರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 05 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

ಅಂದು ಬೆಳಗ್ಗೆ ಗದ್ವಾಲ್‌ರೋಡ್ ಇಂಡಸ್ಟ್ರೀಯಿಲ್ ಏರಿಯಾ., ದೇವಿ ನಗರ, ಹರಿಜನವಾಡ, ನವಾಬ್‌ಗಡ್ಡ, ಎನ್.ಜಿ.ಓ ಕಾಲೋನಿ, ಜಲಾಲ್ ನಗರ, ಮಾರ್ಕೇಟ್ ಯಾರ್ಡ್, ನೀರಭಾವಿ ಕುಂಟಾ, ಬಸವನಭಾವಿ ಸರ್ಕಲ್, ಗಂಜ್ ಜಲಾಲ್ ನಗರ, ಮಾರ್ಕೇಟ್ ಯಾರ್ಡ್, ನೀರಭಾವಿ ಕುಂಟಾ, ಬಸವನಭಾವಿ ಸರ್ಕಲ್, ಗಂಜ್ ಸರ್ಕಲ್, ತಾಯಮ್ಮಗುಡಿ, ದೇವಿನಗರ, ಅಶ್ವಿನಿ ಕಾಲೋನಿ, ಅಗ್ರೀಗೋಲ್ಡ್, ಗದ್ವಾಲ ರೋಡ್, ಎಮ್.ವಿ.ಜಿ. ಲೇಔಟ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗ-02ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಸದ್ಗುರು ಸಂಗಮೇಶ್ವರ 58ನೇ ವರ್ಷದ ಪುಣ್ಯ ಆರಾಧನ

ಯುವ ಮಾರ್ಗ ಸುದ್ದಿ



'ಅರಕೇರಾ,ಆ.22– ತಾಲೂಕಿನ ಸುಕ್ಷೇತ್ರ ಎನ್ ಗಣೆಕಲ್ ಗ್ರಾಮದಲ್ಲಿ ಶ್ರೀ ಜ್ಞಾನ ಪ್ರಕಾಶ್ ಮಹಾಂತ ಆಶ್ರಮದಲ್ಲಿ(ಸರ್ವಜ್ಞ ಪೀಠ) ಶನಿವಾರದಂದು ಶ್ರೀ ಸದ್ಗುರು ಸಂಗಮೇಶ್ವರ 58ನೇ ವರ್ಷದ ಪುಣ್ಯ ದಿನೋತ್ಸವ ನಡೆಯಲಿದೆ.

ಪೀಠಾಧಿಪತಿಗಳಾದ ಪರಮ ಪೂಜ್ಯ ಶ್ರೀ ಸಂಗವಿಭು ಗುರುಗಳ ದಿವ್ಯ ಸಾನಿಧ್ಯದಲ್ಲಿ ರಾತ್ರಿ ಭಜನೆ ಕಾರ್ಯಕ್ರಮ ಜರುಗುವುದು.

ಮರುದಿನ ರವಿವಾರದಂದು ಗುರು ಪೂಜೆ ತೀರ್ಥ ಪ್ರಸಾದ ಮತ್ತು ಅನ್ನಸಂತರ್ಪಣೆ ನಡೆಯಲಿದೆ ಎಂದು.

ಶ್ರೀ ಜ್ಞಾನಪ್ರಕಾಶ ಮಹಾಂತ ಆಶ್ರಮ ಸದ್ಭಕ್ತ ಮಂಡಳಿ ತಿಳಿಸಿದ್ದಾರೆ,

## ಭಾರತ ಗ್ರಾಮೀಣ ಬ್ಯಾಂಕ್‌ಗಳ ಖಾಸಗೀಕರಣ ಬೇಡ



**ಕಲಬುರಗಿ,ಆ.22–**ಅಖಿಲ ಭಾರತ ಗ್ರಾಮೀಣ ಬ್ಯಾಂಕ್ ನೌಕರರ ಸಂಯುಕ್ತ ವೇದಿಕೆ ಹಾಗೂ ಕರ್ನಾಟಕ ಗ್ರಾಮೀಣ ಬ್ಯಾಂಕ್ ನೌಕರರ ಸಂಘಗಳ ಒಕ್ಕೂಟದ ನಿಯೋಗವು ಕೇಂದ್ರ ಜಲಶಕ್ತಿ ಹಾಗೂ ರೈಲ್ವೆ ಖಾತೆಗಳ ರಾಜ್ಯ ಸಚಿವರಾಗಿರುವ ವಿ.ಸೋಮಣ್ಣ, ಹಾಗೂ ಕೇಂದ್ರ ಕಾರ್ಮಿಕ ಮತ್ತು ಉದ್ಯೋಗ ಸಚಿವಾಲಯ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯದ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರನ್ನು ದೆಹಲಿಯಲ್ಲಿ ಭೇಟಿಯಾಗಿ ಕೇಂದ್ರ ಹಣಕಾಸು ಸೇವೆಗಳ ಇಲಾಖೆ ಗ್ರಾಮೀಣ ಬ್ಯಾಂಕುಗಳನ್ನು ಐಪಿಓ ಮುಖಾಂತರ ಖಾಸಗೀಕರಣಕ್ಕೆ ಮುಂದಾಗಿದ್ದು, ಈ ಕೂಡಲೇ ಆದೇಶ ಹಿಂಪಡೆದು ಗ್ರಾಮೀಣ ಬ್ಯಾಂಕುಗಳನ್ನು ಸದೃಢಗೊಳಿಸಿ ಕೇಂದ್ರ ಸರ್ಕಾರದ ಅಧೀನದಲ್ಲಿಯೇ ಮುಂದುವರಿಸಿಕೊಂಡು ಹೋಗಲು ಮನವಿ ಪತ್ರ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ರಾಜ್ಯದ ಸಂಸದರಾದ ಮಲ್ಲೇಶ ಬಾಬು, ಡಾ.ಸಿ.ಎನ್. ಮಂಜುನಾಥ, ಗೋವಿಂದ ಕಾರಜೋಳ ರವರನ್ನು ಭೇಟಿ ಮಾಡಿ ಮನವಿ ಪತ್ರ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಬ್ಯಾಂಕ್ ಅಧಿಕಾರಿಗಳ ಸಂಘದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೀರ್ತಿರಾಜ್ ಹೀಡಕಲ್, ನೌಕರರ ಸಂಘದ ರಾಷ್ಟ್ರೀಯ ಉಪಾಧ್ಯಕ್ಷ ಶಿವಕುಮಾರ್ ಬಗಲೂರ, ಖಜಾಂಚಿ ನರಸಿಂಹರಾವ, ಪರಶುರಾಮ ತೇರದಾಳ,ವಸಂತಕುಮಾರ್, ವಿಶ್ವನಾಥ್ ರೆಡ್ಡಿ, ಸತ್ಯನಾರಾಯಣ, ಪ್ರದೀಪ್, ಶ್ರೀನಿವಾಸ, ಅಲೋಕ್, ಶ್ರೀನಿವಾಸಮೂರ್ತಿ, ಪ್ರವೀಣ್, ಮಲ್ಲಿಕಾರ್ಜುನ್, ಮಹಾದೇವ ಸ್ವಾಮಿ, ಹನುಮಾನ್ ಸಿಂಗ್ ಇತರರಿದ್ದರು.

# ರೇಬಿಸ್ ರೋಗದ ಬಗ್ಗೆ ಜಾಗೃತಿ ವಹಿಸಿ




**ಬೀದರ್,ಅ.22–**ಸಾರ್ವಜನಿಕರು ರೇಬಿಸ್ ರೋಗದ ಬಗ್ಗೆ ಜಾಗೃತಿ ವಹಿಸಬೇಕು ಎಂದು ಮುಖ್ಯ ಪಶು ವೈದ್ಯಾಧಿಕಾರಿ ಡಾ. ಸಮುದ್ರ ಕುಲಕರ್ಣಿ ಸಲಹೆ ಮಾಡಿದರು.

ಬೀದರನ ಗ್ಲೋಬಲ್ ಸೈನಿಕ ಅಕಾಡೆಮಿಯಲ್ಲಿ ಈಚೆಗೆ ನಡೆದ ರೇಬಿಸ್ ರೋಗ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಪ್ರಾಣಿಗಳಿಂದ ಮನುಷ್ಯರಿಗೆ ಹರಡುವ ರೇಬಿಸ್ ಮಾರಣಾಂತಿಕ ರೋಗವಾಗಿದೆ. ಸೋಂಕಿತ ಪ್ರಾಣಿ ಇನ್ನೊಂದು ಪ್ರಾಣಿ, ಮನುಷ್ಯನನ್ನು ಪರಚಿದಾಗ ಅಥವಾ ಕಚ್ಚಿದಾಗ ರೋಗ ಹರಡುತ್ತದೆ. ರೋಗ ಪೀಡಿತ ಪ್ರಾಣಿಯ ಜೊಲ್ಲು ಪ್ರಾಣಿ ಅಥವಾ ಮನುಷ್ಯನ ಲೋಳೆ ಪೊರೆ ಸಂಪರ್ಕಕ್ಕೆ ಬಂದಾಗ ರೋಗ ವರ್ಗಾವಣೆ ಆಗುತ್ತದೆ ಎಂದು ತಿಳಿಸಿದರು.

ರೋಗ ತಗಲುವಿಕೆ ಹಾಗೂ ಲಕ್ಷಣ ಗೋಚರಿಸಲು ಮೂರು ತಿಂಗಳು ಹಿಡಿಯಲಿದೆ. ಜ್ವರ, ತಲೆ ನೋವು, ವಾಕರಿಕೆ, ಅತಿಯಾಗಿ ಜೊಲ್ಲು ಸೋರುವುದು, ನುಂಗಲು ಕಷ್ಟವಾಗುವುದು, ನೀರು ಕಂಡರೆ ಭಯ ಉಂಟಾಗುವುದು ರೋಗದ ಲಕ್ಷಣಗಳಾಗಿವೆ. ಪ್ರಾಣಿಗಳು ಕಚ್ಚಿದರೆ ಮಕ್ಕಳು ಹಿರಿಯರ ಗಮನಕ್ಕೆ ತರಬೇಕು ಎಂದು ಹೇಳಿದರು.

ರೇಬಿಸ್ ರೋಗಕ್ಕೆ ನಿಖರ ಚಿಕಿತ್ಸೆ ಇಲ್ಲ. ಹೀಗಾಗಿ ಸಾರ್ವಜನಿಕರು ರೇಬಿಸ್ ಶಂಕಿತ ಪ್ರಾಣಿ ಕಚ್ಚಿದರೆ 0, 3, 7, 14 ಹಾಗೂ 28ನೇ ದಿನ ರೇಬಿಸ್ ನಿರೋಧಕ ಚುಚ್ಚು ಮದ್ದು ತೆಗೆದುಕೊಳ್ಳಬೇಕು. 90 ದಿನಗಳ ಒಳಗೆ ಕೂಡ ಒಂದು ಚುಚ್ಚು ಮದ್ದು ಪಡೆಯಬೇಕು. ಜತೆಗೆ ಕಡ್ಡಾಯವಾಗಿ ಟೆಟ್ನಸ್ ಟಾಕ್ಸೈಡ್ ಇಂಜಕ್ಷನ್ ತೆಗೆದುಕೊಳ್ಳಬೇಕು ಎಂದು ತಿಳಿಸಿದರು.

ಬೀದಿ ನಾಯಿಗಳ ನಿಯಂತ್ರಣಕ್ಕೆ ಪ್ರಾಣಿ ಸಂತಾನ ನಿಯಂತ್ರಣ ಕಾಯ್ದೆ 2023 ಅನ್ನು ಅನುಸರಿಸಬೇಕು ಎಂದು ಹೇಳಿದರು.ಅಕಾಡೆಮಿ ಅಧ್ಯಕ್ಷ, ನಿವೃತ್ತ ಕರ್ನಲ್ ಶರಣಪ್ಪ ಸಿಕೇನಪುರ, ಪ್ರಾಚಾರ್ಯ ಸಮೋದ್ ಮೋಹನನ್ ಉಪಸ್ಥಿತ 'ರಿದ್ದರು. 5 ರಿಂದ 10ನೇ ತರಗತಿ ವರೆಗಿನ ವಿದ್ಯಾರ್ಥಿಗಳು, ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ಪಾಲ್ಗೊಂಡಿದ್ದರು.

# ಮುಂಜಾವಿಗೊಂದು ನುಡಿಕಿರಣಗಳ ದರ್ಶನ :ಸಮಾರೋಪ

**ಕಲಬುರಗಿ,ಆ.22–** ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ ಪ್ರತಿಷ್ಠಾನ ಮತ್ತು ಸರ್ವಜ್ಞ ಹಾಗೂ ಜಸ್ಟಿಸ್ ಶಿವರಾಜ ಪಾಟೀಲ ಕಾಲೇಜು ಸಂಯುಕ್ತಾಶ್ರಯದಲ್ಲಿ ಯುವ ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕಾಗಿ ನ್ಯಾಯಮೂರ್ತಿ ನಾಡೋಜ ಡಾ. ಶಿವರಾಜ ವಿ. ಪಾಟೀಲ ವಿರಚಿತ ಮುಂಜಾವಿಗೊಂದು ನುಡಿಕಿರಣಗಳ ದರ್ಶನ ಶ್ರಾವಣ ಮಾಸದ 11 ದಿನಗಳ ವಿಶೇಷ ಉಪನ್ಯಾಸ ಹಾಗೂ ಪ್ರವಚನ ಮಾಲಿಕೆಯ ಸಮಾರೋಪ ಸಮಾರಂಭ ಜರುಗಿತು.

ಕಾರ್ಯಕ್ರಮದಲ್ಲಿ ಪ್ರವಚನಯೋಗಿ ಪೂಜ್ಯ ಮಹಾಂತ ಸ್ವಾಮಿಗಳು ಮುದಗಲ್ ಅವರು ಮಾತನಾಡುತ್ತ, ಮುಂಜಾವಿಗೊಂದು ನುಡಿಕಿರಣ ಅದೊಂದು ಹೊಂಗಿರಣವಾಗಿದೆ. ಕನ್ನಡಿಗರ ಬದುಕಿನ ಉಪನಿಷತ್ತು. ಅಪರೂಪದ ಅನುಭವದ ನುಡಿಗಳ ನ್ನೊಳಗೊಂಡದ್ದು, ಕೇಳಿದವರಲ್ಲಿ, ಓದಿದವರಲ್ಲಿ ಉತ್ತಮ ಬದಲಾವ ಣೆ ಉಂಟುಮಾಡುವದಾಗಿದ್ದು ಈ ಕುರಿತು ಮಾಡಿದ ಹನ್ನೊಂದು ದಿನಗಳ ಪ್ರವಚನ ನನ್ನ ಜೀವನದ ಧನ್ಯತೆಯ ಕ್ಷಣವಾಗಿದೆ. ಈ ಮೂಲಕ ನಾನು ಅಮೂಲ್ಯ ಬದುಕಿನ ಆನಂದದ ಕ್ಷಣ ಅನುಭವಿಸಿದ್ದೇನೆ. ಪ್ರತಿನಿತ್ಯ ಈ ಜಗತ್ತಿನಲ್ಲಿ ಭೂಮಿ, ಪರಿಸರ, ಸೃಷ್ಟಿ, ಪಂಚಭೂತಗಳು, ಹಣ್ಣು ಹಂಪಲು, ಮೊಗ್ಗು-ಹೂ ಅರಳುವದು ಮುಂತಾದ ಸೃಷ್ಟಿ ಸಹಜ ಕ್ರಿಯೆಗಳು. ಹಾಗೆ ಹನ್ನೊಂದು ದಿನಗಳ ಪ್ರವಚನದಲ್ಲಿ ತಾವು ನುಡಿಮುತ್ತುಗಳ ಕಿರಣದ ದರ್ಶನವನ್ನು ಮಕ್ಕಳು ಪಡೆಯುವ ಮೂಲಕ ಜ್ಞಾನ ಕಿರಣವನ್ನು ಪಡೆದು ಜೀವನದಲ್ಲಿ ಉನ್ನತಸ್ಥಾನ ಪಡೆದು ಶ್ರೇಷ್ಠ ಸಾಧಕರಾಗಬೇಕು ಎಂದರು. ನಿಮಗೆ ನೀವೇ ಶಿಲ್ಪಿಗಳಾಗಿ ನಿಮ್ಮ ಆದರ್ಶದ ಬದುಕನ್ನು ಕಟ್ಟಿಕೊಳ್ಳಬೇಕು. ವಿದ್ಯೆಯೊಂದಿಗೆ ವಿನಯ ವಂತಿಕೆ ನಿಮ್ಮದಾಗಿರಲಿ. ಉತ್ತಮ ರಾಷ್ಟ್ರ ಕಟ್ಟುವ ಪ್ರಗತಿ ಮಾಡುವ ಗುರಿ ನಿಮ್ಮದಾಗಬೇಕೆಂದು ಪ್ರೋತ್ಸಾಹಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಪತ್ರಕರ್ತ ಶಿವರಂಜನ್ ಸತ್ಯಂಪೇಟ ,ವಿಶ್ರಾಂತ ಪ್ರಾಧ್ಯಾಪಕ ಡಾ. ಕಲ್ಯಾಣರಾವ ಜಿ. ಪಾಟೀಲ ಪಾಲ್ಗೊಂಡರು. ಜಿಲ್ಲಾ ನ್ಯಾಯಾಧೀಶ (ನಿವೃತ್ತ)



ಮತ್ತು ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ ಪ್ರತಿಷ್ಠಾನದ ಅಧ್ಯಕ್ಷ ಎಸ್.ಎಂ. ರಡ್ಡಿ ಅಧ್ಯಕ್ಷತೆ ವಹಿಸಿದ್ದರು.

ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಚನ್ನಾರಡ್ಡಿ ಪಾಟೀಲ ಅವರು ಮಾತನಾಡಿ ಇಂದಿನ ಯುವ ಜನಾಂಗಕ್ಕೆ ಸರಿಯಾದ ಮಾರ್ಗದಲ್ಲಿ ನಡೆದು ಪಾಲಕರ ಪರಿಶ್ರಮ ಅರಿತು ಶಿಕ್ಷಕರ ಮಾರ್ಗದರ್ಶನದಲ್ಲಿ ಮುನ್ನಡೆದು ತಮ್ಮ ಬದುಕಿನ ಶಿಲ್ಪಿ ತಾವೆ ಆಗಿ ದೇಶಕ್ಕೆ ಕೊಡುಗೆ ನೀಡಬೇಕು. ನ್ಯಾಯಮೂರ್ತಿ ನಾಡೋಜ ಡಾ. ಶಿವರಾಜ ವಿ. ಪಾಟೀಲ ಅವರ ನುಡಿಮುತ್ತುಗಳ ದರ್ಶನ ವಿದ್ಯಾರ್ಥಿಗಳಿಗೆ ಮಾಡುವ ಉದ್ದೇಶ ಅವರಂತೆ ನೀವು ಸಾಧನೆ ಮಾಡಬೇಕುಎಂದರು

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಗೀತಾ ಚನ್ನಾರಡ್ಡಿ ಪಾಟೀಲ, ಸಂಸ್ಥೆಯ ಮುಖ್ಯ ಶೈಕ್ಷಣಿಕ ನಿರ್ದೇಶಕ ಅಭಿಷೇಕ್ ಚನ್ನಾರಡ್ಡಿ ಪಾಟೀಲ, ಕಾಲೇಜಿನ ಪ್ರಾಚಾರ್ಯ ಪ್ರಶಾಂತ ಕುಲಕರ್ಣಿ, ವಿನೂತಾ ಆರ್.ಬಿ., ಅನಿತಾ ಕುಲಕರ್ಣಿ, ಪ್ರಭುಗೌಡ ಸಿದ್ಧಾರೆಡ್ಡಿ, ಕರುಣೇಶ ಹಿರೇಮಠ, ಉಪನ್ಯಾಸಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಗುರುರಾಜ ಕುಲಕರ್ಣಿ ಸ್ವಾಗತಿಸಿದರು. ಡಾ. ವಿದ್ಯಾವತಿ ಪಾಟೀಲ ನಿರೂಪಸಿದರು. ವೀರೇಶಕುಮಾರ ಮಳಲಿ, ಬಸವರಾಜ ಹೊನ್ನಿಗನೂರ ಸಂಗೀತ ಕಾರ್ಯಕ್ರಮ ನೆರವೇರಿಸಿದರು.

# ಬೀದಿ ನಾಯಿಗಳಿಗೆ, ಸಂತಾನ ಹರಣ, ಚಿಕಿತ್ಸೆಗೆ ಸುಪ್ರೀಂ ಸೂಚನೆ


**ನವದೆಹಲಿ,ಆ.22–** ದೆಹಲಿ ಹಾಗೂ ಎನ್‌ಸಿಆರ್‌ನಲ್ಲಿರುವ ಬೀದಿ ನಾಯಿಗಳನ್ನು ಹಿಡಿದು ಅವುಗಳಿಗೆ ಸಂತಾನಹರಣ ಚಿಕಿತ್ಸೆ ನೀಡಿ ರೇಬಿಸ್ ನಿರೋಧಕ ಚುಚ್ಚುಮದ್ದು ನೀಡಬೇಕು. ಅವುಗಳಿಂದ ರೇಬಿಸ್ ಸೋಂಕು ತಗುಲಿಲ್ಲ ಎಂದು ದೃಢಪಟ್ಟು ಆ ನಾಯಿಗಳು ಕಚ್ಚುವ ಸ್ವಭಾವವಲ್ಲ ಎಂದು ಖಾತ್ರಿಯಾದರೆ ಮಾತ್ರ ಹೊರಗೆ ಬಿಡಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ.

ದೆಹಲಿ ಮತ್ತು ಎನ್‌ಸಿಆರ್ ಪ್ರದೇಶಗಳಲ್ಲಿರುವ ಬೀದಿ ನಾಯಿಗಳನ್ನು ಹಿಡಿದು ಆಶ್ರಯ ತಾಣಗಳಿಗೆ ಕಳುಹಿಸುವಂತೆ ಆ. 11ರ ತಮ್ಮ ಆದೇಶವನ್ನು ಮಾರ್ಪಾಡು ಮಾಡಿ ಸುಪ್ರೀಂಕೋರ್ಟ್ ಇಂದು ಹೊಸ ಆದೇಶ ಪ್ರಕಟಿಸಿದೆ.

ನಾಯಿಗಳಿಗೆ ಆಹಾರವನ್ನು ಬೇಕಾಬಿಟ್ಟಿಯಾಗಿ ಬಿಸಾಡದೆ ಅದಕ್ಕಾಗಿ ನಿರ್ದಿಷ್ಟ ಸ್ಥಳವನ್ನು ಸ್ಥಳೀಯ ಆಡಳಿತ ಗುರುತಿಸಬೇಕು. ಇದು ಆಯಾ ಬಡಾವಣೆಯ ಜನವಸತಿ ಪ್ರದೇಶ, ಬೀದಿ ನಾಯಿಗಳ ಸಂಖ್ಯೆಗೆ ಅನುಗುಣವಾಗಿರಬೇಕು ಎಂದು ಸುಪ್ರೀಂಕೋರ್ಟ್ ತಾಕೀತು ಮಾಡಿದೆ.

ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ವಿಕ್ರಂನಾಥ್, ಸಂದೀಪ್‌ಮೆಹ್ತಾ ಮತ್ತು ಎನ್.ವಿ ಅನ್ಜಾರಿಯಾ ಅವರನ್ನೊಳಗೊಂಡ ಮೂವರು ನ್ಯಾಯಾಧೀಶರ ಪೀಠವು, ನ್ಯಾಯಾಲಯದ ಹಿಂದಿನ ಆದೇಶವನ್ನು ಪರಿಶೀಲಿಸಿ ಈ ವಿಷಯದ ವ್ಯಾಪ್ತಿಯನ್ನು ವಿಸ್ತರಿಸಿದೆ. ಅಲ್ಲದೆ ಹೈಕೋರ್ಟ್‌ಗಳ ಮುಂದೆ ಬಾಕಿ ಇರುವ ಎಲ್ಲ ರೀತಿಯ ವಿಷಯಗಳನ್ನು ಅಂತಿಮ ರಾಷ್ಟ್ರೀಯ ನೀತಿಗಾಗಿ ಉನ್ನತ ನ್ಯಾಯಾಲಯಕ್ಕೆ ವರ್ಗಾಯಿಸಲು ದ್ವಿಸದಸ್ಯ ಪೀಠ ಆದೇಶಿಸಿತು.

ಪುರಸಭೆ ಅಧಿಕಾರಿಗಳು ಪ್ಯಾರಾ-12.1, 12.2ನ್ನು ಪಾಲಿಸಬೇಕು.



ಬೀದಿ ನಾಯಿಗಳನ್ನು ಬಿಡುವುದನ್ನು ಹಾಗೂ ನಿಷೇಧಿಸುವುದನ್ನು ತಡೆ ಹಿಡಿಯಲಾಗುತ್ತದೆ. ಅವುಗಳಿಗೆ ಜಂತುಹುಳು ನಿವಾರಕ, ಸಂತಾನಹರಣ ಚಿಕಿತ್ಸೆ ಇತ್ಯಾದಿಗಳನ್ನು ನೀಡಿದ ಬಳಿಕ ಮತ್ತದೆ ಪ್ರದೇಶಕ್ಕೆ ಹಿಂತಿರುಗಿಸಲಾಗುತ್ತದೆ ಎಂದು ಹೇಳಿದೆ. ಅಂತಹ ರೋಗಪೀಡಿತ ನಾಯಿಗಳನ್ನು ಬೀದಿಗಳಲ್ಲಿ ಬಿಡದೆ ಆಶ್ರಯ ತಾಣಗಳಿಗೆ ರವಾನಿಸಬೇಕೆಂದು ನ್ಯಾಯಮೂರ್ತಿ ವಿಕ್ರಂನಾಥ್ ಹೇಳಿದರು.

ಆ. 11 ರಂದು ನ್ಯಾಯಮೂರ್ತಿ ಜೆ.ಬಿ ಪಾರ್ದಿವಾಲಾ ಮತ್ತು ಆರ್. ಮಹದೇವನ್ ಇದ್ದ ನ್ಯಾಯಪೀಠ ದೆಹಲಿ ಎನ್‌ಸಿಆರ್ ಸುತ್ತಮುತ್ತ ಇರುವ ಬೀದಿ ನಾಯಿಗಳನ್ನು ಹಿಡಿದು ಆಶ್ರಯ ತಾಣಗಳಿಗೆ ಸ್ಥಳಾಂತರಿಸುವಂತೆ ಅಧಿಕಾರಿಗಳಿಗೆ ನಿರ್ದೇಶಿಸಿತ್ತು.ಈ ನಿರ್ದೇಶನಗಳಿಗೆ ತಡೆ ನೀಡಬೇಕು ಎಂದು ಕೋರಿ ಸಲ್ಲಿಸಲಾದ ಮಧ್ಯಂತರ ಅರ್ಜಿಯ ಆದೇಶವನ್ನು ಸುಪ್ರೀಂಕೋರ್ಟ್ ತ್ರಿಸದಸ್ಯ ಪೀಠ ಮಾರ್ಪಾಡು ಮಾಡಿ ತೀರ್ಪು ಪ್ರಕಟಿಸಿದೆ. ಇದರಿಂದಾಗಿ ಪ್ರಾಣಿಪ್ರಿಯರಿಗೂ ಕಾನೂನು ಸಮರದಲ್ಲಿ ಜಯ ಸಿಕ್ಕಂತಾಗಿದೆ.

## ನವೋದಯ ವಿದ್ಯಾಲಯದ ಪ್ರವೇಶಕ್ಕೆ ಅರ್ಜಿ ಅವಧಿ ವಿಸ್ತರಣೆ

**ರಾಯಚೂರು,ಆ.22–**ಜಿಲ್ಲೆಯ ಲಿಂಗಸೂಗೂರು ತಾಲೂಕಿನ ಪಿ.ಎಂ.ಶ್ರೀ ನವೋದಯ ವಿದ್ಯಾಲಯದಿಂದ 6ನೇ ತರಗತಿ ಪ್ರವೇಶಕ್ಕಾಗಿ ಆನ್‌ಲೈನ್ ಅರ್ಜಿ ಸಲ್ಲಿಸುವ ದಿನಾಂಕವನ್ನು ಆಗಸ್ಟ್ 27ರವರೆಗೆ ವಿಸ್ತರಿಸಲಾಗಿದೆ.

ಅರ್ಹ ವಿದ್ಯಾರ್ಥಿಗಳು ಹಾಗೂ ಪೋಷಕರು ಈ ಅವಕಾಶವನ್ನು ಸದ್ಬಳಕೆ ಮಾಡಿಕೊಂಡು, ನಿಗದಿತ ದಿನಾಂಕದೊಳಗೆ ಆನ್‌ಲೈನ್ ವೆಬ್ ಸೈಟ್ https://cbseitms.rcil.gov.in/nvs ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಜವಾಹರ ನವೋದಯ ವಿದ್ಯಾಲಯ, ರಾಯಚೂರು ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಜವಾಹರ ನವೋದಯ ವಿದ್ಯಾಲಯದ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧ ಯೋಜನೆಗಳಡಿ ಸೇವಾ-ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

**ರಾಯಚೂರು,ಆ.22–**ಇಲ್ಲಿನ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಿಂದ 2025-26 ನೇ ಸಾಲಿಗೆ ಜಾರಿಯಲ್ಲಿರುವ ವಿವಿಧ ಯೋಜನೆಗಳಡಿ ಸೇವಾ-ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ವಿಕಲಚೇತನ ಫಲಾನುಭವಿಗಳು ವಿವಿಧ ಯೋಜನೆಗಳಾದ, ಆಧಾರ್ ಯೋಜನೆ, ವೈದ್ಯಕೀಯ ಪರಿಹಾರ ನಿಧಿ ಯೋಜನೆ, ಪ್ರತಿಭಾವಂತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಯೋಜನೆ, ನಿರುದ್ಯೋಗ ಭತ್ಯೆ ಯೋಜನೆ, ಶಿಶುಪಾಲನೆ ಭತ್ಯ ಯೋಜನೆ, ಮರಣ ಪರಿಹಾರ ನಿಧಿ ಯೋಜನೆ, ಪ್ರತಿಭೆ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್ ಯೋಜನೆ, ದೃಷ್ಟಿದೋಷ ಹೊಂದಿದ ವಿಕಲಚೇತನರಿಗೆ ಬ್ರೈಲ್ ಕಿಟ್ ಯೋಜನೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಶ್ರವಣದೋಷವುಳ್ಳ ವ್ಯಕ್ತಿಗಳಿಗೆ ಸ್ವಯಂ ಉದ್ಯೋಗಕ್ಕಾಗಿ ಹೊಲಿಗೆ ಯಂತ್ರ ಯೋಜನೆ, ಸಾಧನೆ-ಸಲಕರಣೆ ಯೋಜನೆ, ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್‌ಚೇರ್ ಯೋಜನೆಗಳಿಗೆ ಆನ್‌ಲೈನ್ ವೆಬ್ ಸೈಟ್‌ಗಳಾದ, ಸೇವಾ-ಸಿಂಧು ತಂತ್ರಾಂಶದಡಿ ,ಗ್ರಾಮ-ಒನ್, ಕರ್ನಾಟಕ-ಒನ್, ಬೆಂಗಳೂರು-ಒನ್ ಹಾಗೂ https://sevasindhu.karnataka.gov.in/Sevasindhu/Kannada ಪೋರ್ಟಲ್ ಮೂಲಕ ಆಗಸ್ಟ್ 30 ರೊಳಗೆ ಅರ್ಜಿಗಳನ್ನು ಸೂಕ್ತ ದಾಖಲಾತಿಗಳೊಂದಿಗೆ ಆನ್‌ಲೈನ್ ಮುಖಾಂತರ ಸಲ್ಲಿಸಬಹುದಾಗಿದೆ, ಇಲಾಖೆಯ ಯೋಜನೆಗಳಿಗೆ ಸಂಬಂಧಿಸಿದಂತೆ ಸಂಪೂರ್ಣವಾದ ಮಾರ್ಗದರ್ಶನಕ್ಕಾಗಿ, ತಾಲೂಕಿನ ಎಂ.ಆರ್.ಡಬ್ಲ್ಯೂ ಎಸ್ ಅಧಿಕಾರಿಗಳನ್ನು ಸಂಪರ್ಕಿಸಲು ದೂರವಾಣಿ ಸೊಖ್ಯೆ: ರಾಯಚೂರು ತಾಲೂಕಿನ ಎಂ.ಆರ್.ಡಬ್ಲ್ಯೂಎಸ್ ಅಧಿಕಾರಿಗಳಾದ, ಅಮರೇಶ ಯಾದವ್-9972237508, ಮಾನವಿ-ಸಿರವಾರ ತಾಲೂಕಿನ ಎಂ.ಆರ್.ಡಬ್ಲ್ಯೂ ಎಸ್ ಅಧಿಕಾರಿಗಳಾದ ರಾಘವೇಂದ್ರ-9740203769, ದೇವದುರ್ಗ ತಾಲೂಕಿನ ಎಂ.ಆರ್.ಡಬ್ಲ್ಯೂಎಸ್ ಅಧಿಕಾರಿಗಳಾದ ಲೋಕಪ್ಪ ನೂರು ನಾಯ್ಕೆ-9945207693, ಸಿಂಧನೂರು ತಾಲೂಕಿನ ಎಂ.ಆರ್.ಡಬ್ಲ್ಯೂಎಸ್ ಅಧಿಕಾರಿಗಳಾದ ಬಸವರಾಜ ಸಾಸಲಮರಿ-9900298217, ಲಿಂಗಸ್ಗೂರು-ಮಸ್ಕಿ, ತಾಲೂಕಿನ ಎಂ.ಆರ್.ಡಬ್ಲ್ಯೂಎಸ್ ಅಧಿಕಾರಿಗಳಾದ ನಾಗರಾಜ-9901668380 ಹಾಗೂ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳ ಕಚೇರಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯ, ಕಚೇರಿಗೆ ಕಚೇರಿ ಕೆಲಸದ ಸಮಯದಲ್ಲಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅಕ್ರಮವಾಗಿ ಅಕ್ಕಿ ಸಾಗಾಟ : ಆಹಾರ ಇಲಾಖೆ ದಾಳಿ-ಅಕ್ಕಿ ವಶ



**ವಿಜಯಪುರ ಆ.22–** ರಾಷ್ಟ್ರೀಯ ಹೆದ್ದಾರಿ-52ರ ಅರ್ಜನಾಳ ಕ್ರಾಸ್ ಹತ್ತಿರ ಅಕ್ರಮವಾಗಿ ಪಡಿತರ ಅಕ್ಕಿ ಸಾಗಾಟ ಮಾಡುತ್ತಿದ್ದ ಸಂದರ್ಭದಲ್ಲಿ ಆಹಾರ ಇಲಾಖೆಯ ಅಧಿಕಾರಿಗಳು ದಾಳಿ ನಡೆಸಿ, ಅಕ್ರಮವಾಗಿ ಸಾಗಿಸುತ್ತಿದ್ದ ಅಕ್ಕಿಯನ್ನು ವಶಕ್ಕೆ ಪಡೆದಿದ್ದಾರೆ.

ರಾಷ್ಟ್ರೀಯ ಹೆದ್ದಾರಿ-52ರ ಅರ್ಜನಾಳ ಕ್ರಾಸ್ ಹತ್ತಿರ ಲಾರಿಯಲ್ಲಿ ಅಕ್ರಮವಾಗಿ ಅಕ್ಕಿ ಸಾಗಾಟ ಮಾಡುತ್ತಿರುವ ಸಂದರ್ಭದಲ್ಲಿ ಆಹಾರ ಇಲಾಖೆ ಹಾಗೂ ಪೊಲೀಸ್ ಇಲಾಖೆ ದಾಳಿ ನಡೆಸಿ, ಒಟ್ಟು 121.30 ಕ್ವಿಂಟಲ್ ಅಕ್ಕಿ ಹಾಗೂ ಲಾರಿ ವಶಕ್ಕೆ ಪಡೆದು ಅರ್ಶದ ದಾಂಡೇವಾಲೆ ಇವರ ಮೇಲೆ ಝಳಕಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಈ ದಾಳಿಯಲ್ಲಿ ಇಂಡಿ ತಾಲ್ಲೂಕಿನ ಆಹಾರ ನಿರೀಕ್ಷಕರಾದ ಸಿದ್ರಾಮೇಶ ಹಲಸಂಗಿ, ಝಳಕಿ ಪಿಎಸ್‌ಐ ಮಂಜುನಾಥ ತಿರಕ್ಕಣ್ಣವರ ಪೋಲಿಸ್ ಹಾಗೂ ಆಹಾರ ಇಲಾಖೆಯ ಸಿಬ್ಬಂದಿಗಳು ಇದ್ದರು ಎಂದು ಆಹಾರ ಇಲಾಖೆಯ ಉಪ ನಿರ್ದೇಶಕರಾದ ವಿನಯಕುಮಾರ ಪಾಟೀಲ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H